ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ

07 ಜುಲೈ, 2026 ಮಂಗಳವಾರ ಬೆಲೆ ₹ 2.00 ಸಂಪುಟ : 20 ಸಂಚಿಕೆ : 118 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629



ಬ್ರೆಜಿಲ್ ತಂಡದ ತಾರಾ ಆಟಗಾರ ನೇಮರ್ ಜೂನಿಯರ್ ಅಂತರರಾಷ್ಟ್ರೀಯ ಫುಟ್‌ಬಾಲ್‌ಗೆ ನಿವೃತ್ತಿ ಘೋಷಿಸಿದ್ದಾರೆ.



ಒಬ್ಬ ಮತ್ತು ಇನ್ನೊಬ್ಬನಂತೆ ಮೊತ್ತಬ್ಬನಿಲ್ಲ » 2


ಗುಡಿಸಲು ನಿವಾಸಿಗಳಿಗೆ ಶೀಘ್ರದಲ್ಲೇ ನಿವೇಶನ ಹಂಚಿಕೆ » 3


ಅಧಿಕಾರಿಗಳು ಸರ್ಕಾರದ ಮಾರ್ಗಸೂಚಿ ಪಾಲಿಸಿ » 4

# ಬಿರುಗಾಳಿ-ಮಳೆಗೆ ಮಲೆನಾಡು ತತ್ತರ

## ಶಾಲೆಗಳಿಗೆ ರಜೆ ಘೋಷಣೆ | ಧರೆಗುರುಳಿದ ಮರಗಳು, ವಿದ್ಯುತ್ ಕಂಬಗಳು | ಜನಜೀವನ ಅಸ್ತವ್ಯಸ್ತ


• ಪ್ರಜೋದಯ ವರದಿ

**ಹಾಸನ:** ಮಲೆನಾಡು ಭಾಗದಲ್ಲಿ ವರುಣನ ಅಬ್ಬರ ಜೋರಾಗಿದ್ದು, ಬಿರುಗಾಳಿ ಮಳೆಗೆ ನೂರಾರು ಮರಗಳು ಧರೆಗುರುಳಿ ಅಪಾರ ಪ್ರಮಾಣ ಹಾನಿಯುಂಟಾಗುವ ಜೊತೆಗೆ ಜನಜೀವನ ಅಸ್ತವ್ಯಸ್ತಗೊಂಡಿದೆ.

ಮಳೆಗಿಂತ ಗಾಳಿಯ ವೇಗವೇ ಹೆಚ್ಚಾಗಿರುವುದರಿಂದ ಬೃಹತ್ ಮರಗಳು ವಿದ್ಯುತ್ ತಂತಿಯ ಮೇಲೆ ಬಿದ್ದ ಪರಿಣಾಮ ಸಕಲೇಶಪುರ ತಾಲ್ಲೂಕಿನ ಬಹುತೇಕ ಗ್ರಾಮಗಳಲ್ಲಿ ವಿದ್ಯುತ್ ಸಂಪರ್ಕ ಕಡಿತಗೊಳಿಸಲಾಗಿದೆ. ಸೋಮವಾರ ಬಿರುಗಾಳಿ ಸಹಿತ ಮಳೆಯ ಆರ್ಭಟ ಜೋರಾಗಿದ್ದರಿಂದ ಸಕಲೇಶಪುರ ತಾಲ್ಲೂಕಿನ ಎಲ್ಲಾ ಅಂಗನವಾಡಿ, ಪ್ರಾಥಮಿಕ ಹಾಗು ಪ್ರೌಢಶಾಲೆಗಳಿಗೆ ತಹಶೀಲ್ದಾರ್ ಸುಪ್ರಿತಾ ಅವರು ರಜೆ ಘೋಷಿಸಿದ್ದಾರೆ.

ಜಿಲ್ಲೆಯಲ್ಲಿ ನಿರಂತರ ಮಳೆ ಸುರಿಯುತ್ತಿದ್ದು, ಮಲೆನಾಡು ಭಾಗದಲ್ಲಿ ಗಾಳಿಯ ತೀವ್ರತೆಯೂ ಹೆಚ್ಚಾಗಿದೆ. ಸಕಲೇಶಪುರ, ಆಲೂರು ಹಾಗು ಬೇಲೂರು ತಾಲ್ಲೂಕುಗಳಲ್ಲಿ ಜೋರು ಮಳೆಯಾಗಿದ್ದು, ಹಲವೆಡೆ ಮರಗಳು ಉರುಳಿ ಮನೆ ಮೇಲೆ ಬಿದ್ದು ಹಾನಿಯುಂಟಾಗಿದೆ.

ಹಾಸನ ತಾಲ್ಲೂಕಿನ ಹನುಮನಹಳ್ಳಿ ಗ್ರಾಮದಲ್ಲಿ ಬಿರುಗಾಳಿಯ ರಭಸಕ್ಕೆ ಬೃಹತ್ ಗಾತ್ರದ ಮರ ಮನೆ ಮೇಲೆ ಉರುಳಿ ಬಿದ್ದ ಪರಿಣಾಮ ತಾಂತಯ್ಯ ಅವರ ವಾಸದ ಮನೆಗೆ ಹಾನಿಯಾಗಿದೆ. ಜಮೀನಿನ ಪಕ್ಕದಲ್ಲಿರುವ ಮನೆಯಲ್ಲಿ ಕುಟುಂಬಸ್ಥರೊಂದಿಗೆ ವಾಸವಾಗಿದ್ದ ಅವರು ಅಪಾಯದಿಂದ ಪಾರಾಗಿದ್ದಾರೆ. ಮನೆಗೆ ಹಾನಿಯಾಗಿರುವುದರಿಂದ ಕುಟುಂಬ ಸಂಕಷ್ಟಕ್ಕೆ ಸಿಲುಕಿದೆ. ಅಧಿಕಾರಿಗಳು ತಕ್ಷಣ ಭೇಟಿ ನೀಡಿ ಸೂಕ್ತ ಪರಿಹಾರ ಒದಗಿಸಬೇಕೆಂದು ಆಗ್ರಹಿಸಿದ್ದಾರೆ.



### ಧರೆಗುರುಳಿದ ವಿದ್ಯುತ್ ಕಂಬಗಳು

ಸಕಲೇಶಪುರ ತಾಲ್ಲೂಕಿನ ಬ್ಯಾಕರವಳ್ಳಿ ಸಮೀಪದ ಕುಣಿಗಲ್ ಗ್ರಾಮದಲ್ಲಿ ಬಿರುಗಾಳಿಯ ಪರಿಣಾಮ ಬೃಹತ್ ಮರ ವಿದ್ಯುತ್ ಮಾರ್ಗದ ಮೇಲೆ ಉರುಳಿ ಬಿದ್ದಿದ್ದು, ಹತ್ತುಕ್ಕೂ ಹೆಚ್ಚು ವಿದ್ಯುತ್ ಕಂಬಗಳು ಮುರಿದು ಬಿದ್ದಿವೆ. ಇದರಿಂದ ಹಲವು ಗ್ರಾಮಗಳಿಗೆ ವಿದ್ಯುತ್ ಸಂಪರ್ಕ ಸಂಪೂರ್ಣ ಸ್ಥಗಿತಗೊಂಡಿದೆ. ವಿದ್ಯುತ್ ಇಲಾಖೆ ಸಿಬ್ಬಂದಿ ಮಳೆಯ ನಡುವೆಯೇ ದುರಸ್ತಿ ಕಾರ್ಯ ಕೈಗೊಂಡಿದ್ದು, ವಿದ್ಯುತ್ ಪೂರೈಕೆ ಶೀಘ್ರ ಪುನರ್ ಸ್ಥಾಪಿಸಲು ಪ್ರಯತ್ನಿಸುತ್ತಿದ್ದಾರೆ.

### ಹೆದ್ದಾರಿಗೆ ಬಿದ್ದ ಮರ, ಸಂಚಾರ ಸ್ಥಗಿತ

ಸಕಲೇಶಪುರ ತಾಲ್ಲೂಕಿನ ಮಾರನಹಳ್ಳಿ ಸಮೀಪ ರಾಷ್ಟ್ರೀಯ ಹೆದ್ದಾರಿ-75ರ ಬೆಂಗಳೂರು-ಮಂಗಳೂರು ರಸ್ತೆಯ ಮೇಲೆ ಬೃಹತ್ ಮರ ಉರುಳಿ ಬಿದ್ದ ಪರಿಣಾಮ ಕೆಲಕಾಲ ವಾಹನ ಸಂಚಾರ ನಿಧಾನಗೊಂಡಿತು. ಮರವು ವಿದ್ಯುತ್ ತಂತಿಗಳ ಮೇಲೆಯೂ ಬಿದ್ದಿದ್ದರಿಂದ ಪರಿಸ್ಥಿತಿ ಗಂಭೀರವಾಗಿತ್ತು. ಮಾಹಿತಿ ತಿಳಿದ ತಕ್ಷಣ ಅರಣ್ಯ ಇಲಾಖೆ, ವಿದ್ಯುತ್ ಇಲಾಖೆ ಸಿಬ್ಬಂದಿ ಹಾಗು ಕಾರ್ಮಿಕರು ಸ್ಥಳಕ್ಕೆ ಆಗಮಿಸಿ ಮರವನ್ನು ತೆರವುಗೊಳಿಸಿ ವಾಹನ ಸಂಚಾರವನ್ನು ಸುಗಮಗೊಳಿಸಿದರು.

**ಕಾರಿನ ಮೇಲೆ ಬಿದ್ದ ಮರದ ಕೊಂಬೆ**

ಸಕಲೇಶಪುರ ತಾಲ್ಲೂಕಿನ ಕೊಲ್ಲಹಳ್ಳಿ ಸಮೀಪ ರಾಷ್ಟ್ರೀಯ ಹೆದ್ದಾರಿ-75ರಲ್ಲಿ ಸಾಗುತ್ತಿದ್ದ ಕಾರಿನ ಮೇಲೆ ಏಕಾಏಕಿ ಮರದ ಕೊಂಬೆ ಬಿದ್ದ ಘಟನೆ ನಡೆದಿದೆ. ಕುಟುಂಬ ಸಮೇತರಾಗಿ ಪ್ರಯಾಣಿಸುತ್ತಿದ್ದ ಸೌಕತ್ ಹಾಜಿ ಅವರು ಸಮಯಪ್ರಜ್ಞೆಯಿಂದ ತಕ್ಷಣ ಕಾರು ನಿಲ್ಲಿಸಿದ್ದರಿಂದ ದೊಡ್ಡ ಅನಾಹುತ ತಪ್ಪಿದೆ. ಘಟನೆಯಲ್ಲಿ ಕಾರಿಗೆ ಹಾನಿಯಾಗಿದ್ದು, ಪ್ರಯಾಣಿಕರು ಸುರಕ್ಷಿತರಾಗಿದ್ದಾರೆ.



### ಜಲಾಶಯಗಳ ಒಳಹರಿವು ಹೆಚ್ಚಳ

ಹಾಸನ : ಮೂಡಿಗೆರೆ-ಚಿಕ್ಕಮಗಳೂರು ಭಾಗದಲ್ಲಿ ಉತ್ತಮ ಮಳೆಯಾಗುತ್ತಿರುವ ಹಿನ್ನಲೆ ಹೇಮಾವತಿ ಜಲಾಶಯದ ಒಳಹರಿವು ಹೆಚ್ಚಳವಾಗಿದೆ. ಪ್ರಸ್ತುತ ಜಲಾಶಯಕ್ಕೆ 6,294 ಕ್ಯೂಸೆಕ್ ನೀರು ಹರಿದು ಬರುತ್ತಿದ್ದು, ಕಳೆದ ವರ್ಷ ಇದೇ ಅವಧಿಯಲ್ಲಿ 17,668 ಕ್ಯೂಸೆಕ್ ಒಳಹರಿವು ದಾಖಲಾಗಿತ್ತು. 37.103 ಟಿಎಂಸಿ ನೀರು ಸಂಗ್ರಹ ಸಾಮರ್ಥ್ಯ ಹೊಂದಿರುವ ಜಲಾಶಯದಲ್ಲಿ ಸದ್ಯ 16.641 ಟಿಎಂಸಿ ನೀರು ಸಂಗ್ರಹವಾಗಿದೆ. 12.4269 ಟಿಎಂಸಿ ನೀರು ಮಾತ್ರ ಬಳಕೆಗೆ ಲಭ್ಯವಿದ್ದು, 4.372 ಟಿಎಂಸಿ ನೀರು ಡೆಡ್ ಸ್ಟೋರೇಜ್ ಆಗಿದೆ. ಈ ಬಾರಿ ಕಳೆದ ವರ್ಷಕ್ಕೆ ಹೋಲಿಸಿದರೆ ಜಲಾಶಯದಲ್ಲಿ ಅರ್ಧದಷ್ಟು ಮಾತ್ರ ನೀರು ಲಭ್ಯವಿದೆ.

ಯಗಚಿ ಜಲಾಶಯದ ಗರಿಷ್ಠ ಮಟ್ಟ 3164.92 ಅಡಿಗಳಾಗಿದ್ದು (3.603 ಟಿಎಂಸಿ), ಸೋಮವಾರ 3159.86 ಅಡಿಯಷ್ಟು (2.74 ಟಿಎಂಸಿ) ನೀರು ಸಂಗ್ರಹವಾಗಿದೆ. 139 ಕ್ಯೂಸೆಕ್ ಒಳಹರಿವಿದೆ. 10 ಕ್ಯೂಸೆಕ್ ನೀರನ್ನು ಹೊರ ಬಿಡಲಾಗುತ್ತಿದೆ.

ವಾಟೆಹೊಳೆ ಜಲಾಶಯವೂ 3169 ಅಡಿ (1.51 ಟಿಎಂಸಿ) ನೀರು ಸಂಗ್ರಹಣಾ ಸಾಮರ್ಥ್ಯ ಹೊಂದಿದ್ದು, ಅಣೆಕಟ್ಟೆಯಲ್ಲಿ ಪ್ರಸ್ತುತ 3158.13 (0.914 ಟಿಎಂಸಿ) ನೀರು ಸಂಗ್ರಹವಾಗಿದೆ. 11 ಕ್ಯೂಸೆಕ್ ನೀರನ್ನು ಹೊರ ಬಿಡಲಾಗುತ್ತಿದೆ. 254 ಕ್ಯೂಸೆಕ್ ಒಳಹರಿವು ಬರುತ್ತಿದೆ.

**ನಾಲ್ಕು ದಿನಗಳಲ್ಲಿ 10 ಇಂಚು ಮಳೆ**

ಮಲೆನಾಡು ಭಾಗದಲ್ಲಿ ಕಳೆದ ನಾಲ್ಕು ದಿನಗಳಿಂದ ನಿರಂತವಾಗಿ ಸುರಿಯುತ್ತಿರುವ ಮಳೆಯಿಂದ ಸಕಲೇಶಪುರ ತಾಲ್ಲೂಕಿನಲ್ಲಿ 10 ಇಂಚಿಗೂ ಹೆಚ್ಚಿನ ಮಳೆ ದಾಖಲಾಗಿದೆ.

ಕಳೆದ 24 ಗಂಟೆ ಅವಧಿಯಲ್ಲಿ ಸಕಲೇಶಪುರ ಪಟ್ಟಣದಲ್ಲಿ 1 ಇಂಚು, ಬೆಳಗೋಡು ಭಾಗದಲ್ಲಿ 1 ಮುಕ್ಕಾಲು ಇಂಚು, ಹಾನುಬಾಳು ಹೋಬಳಿಯಲ್ಲಿ ಎರಡೂವರೆ ಇಂಚು, ಹೆತ್ತೂರು ಹೋಬಳಿಯಲ್ಲಿ 2 ಇಂಚು, ಯಸಳೂರು ಹೋಬಳಿಯಲ್ಲಿ ಒಂದು ಮುಕ್ಕಾಲು ಇಂಚು ಗರಿಷ್ಠ ಮಳೆ ದಾಖಲಾಗಿದೆ. ಆಲೂರು ತಾಲ್ಲೂಕಿನ ಕೆ.ಹೊಸಕೋಟೆ, ಪಾಳ್ಯ ಹೋಬಳಿಯಲ್ಲಿ ತಲಾ ಒಂದು ಇಂಚು, ಬೇಲೂರು ತಾಲ್ಲೂಕಿನ ಅರೇಹಳ್ಳಿಯಲ್ಲಿ ಒಂದೂವರೆ ಇಂಚು, ಬಿಕ್ಕೋಡು ಹೋಬಳಿಯಲ್ಲಿ 1 ಇಂಚು ಮಳೆಯಾಗಿದೆ, ಹಾಸನ, ಸಾಲಗಾಮೆ, ಆಲೂರು ಭಾಗದಲ್ಲಿ ಅರ್ಧ ಇಂಚಿನಷ್ಟು ಮಳೆ ದಾಖಲಾಗಿದೆ.

## ಭೂ ಸಂತ್ರಸ್ತರಿಗೆ ಪರಿಹಾರ ಕಲ್ಪಿಸುವಂತೆ ಸಚಿವರಿಗೆ ಮನವಿ



• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ತಾಲ್ಲೂಕಿನ ಅಮಾನಿಕೆರೆ-ಚನ್ನರಾಯಪಟ್ಟಣ ಏತ ನೀರಾವರಿ ಯೋಜನೆಯಡಿ ಭೂಮಿ ಕಳೆದುಕೊಂಡಿರುವ ರೈತರಿಗೆ ಒಟ್ಟು 11 ಕೋ.ರೂ. ಪರಿಹಾರ ಬಿಡುಗಡೆ ಮಾಡಬೇಕೆಂದು ಶಾಸಕ ಸಿ.ಎನ್ .ಬಾಲಕೃಷ್ಣ ಅವರು ಜಲಸಂಪನ್ಮೂಲ ಸಚಿವ ರಾಮಲಿಂಗಾ ರೆಡ್ಡಿ ಅವರಿಗೆ ಮನವಿ ಸಲ್ಲಿಸಿದರು.

ಬೆಂಗಳೂರಿನ ವಿಧಾನಸೌಧದಲ್ಲಿರುವ ಕಚೇರಿಯಲ್ಲಿ ಸೋಮವಾರ ರಾಮಲಿಂಗಾ ರೆಡ್ಡಿ ಅವರನ್ನು ಭೇಟಿಯಾದ ಶಾಸಕರು, ಭೂ ಪರಿಹಾರವಾಗಿ 11 ಕೋ.ರೂ. ಬಿಡುಗಡೆಯೊಂದಿಗೆ ಅವಾರ್ಡ್ ಮಾಡಿಸಿ ಯೋಜನೆಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸುವಂತೆ ಕೋರಿದರು.

ಚನ್ನರಾಯಪಟ್ಟಣ-ಅಮಾನಿಕೆರೆ ಏತನೀರಾವರಿ ಯೋಜನೆಯಿಂದ ವ್ಯಾಪ್ತಿಯ ಬಹುತೇಕ ಕೆರೆ ಕಟ್ಟೆಗಳಿಗೆ ನೀರು ತುಂಬಿಸಬಹುದು. ವ್ಯಾಪ್ತಿಯಲ್ಲಿ ಅಂತರ್ಜಲ ಚೇತರಿಕೆ ಕಾಣಲಿದ್ದು, ಕೊಳವೆ ಬಾವಿಗಳಲ್ಲಿ ಸಾಕಷ್ಟು ಪ್ರಮಾಣದಲ್ಲಿ ನೀರು ಲಭ್ಯವಾಗಲಿದೆ. ಅದರಿಂದ ಕೃಷಿ ಚಟುವಟಿಕೆ ಬಿರುಸು ಪಡೆಯಲಿದೆ ಎಂದರು.

ಈ ಬಾರಿ ವಾಡಿಕೆಯಂತೆ ಮಳೆ ಸುರಿಯದ ಕಾರಣ ಬಹುತೇಕ ಕೆರೆ ಕಟ್ಟೆಗಳಲ್ಲಿ ಸಂಗ್ರಹಗೊಂಡಿದ್ದ ನೀರು ದಿನದಿಂದ ದಿನಕ್ಕೆ ಕಡಿಮೆಯಾಗುತ್ತಿದೆ. ಚನ್ನರಾಯಪಟ್ಟಣ ತಾಲ್ಲೂಕು ಬರದ ಬೀಡಾಗಿದೆ. ಮಳೆ ಕೊರತೆಯಿಂದಾಗಿ ಮುಂಗಾರು ಹಂಗಾಮಿನ ಯಾವುದೇ ಬೆಳೆ ಕೈಗೊಂಡಿಲ್ಲ. ರಾಗಿ ಬಿತ್ತನೆಯ ದಿನಗಳು ಸಮೀಪಿಸಿದರೂ ಭೂಮಿ ಹದಗೊಳಿಸಲು ಸಾಧ್ಯವಾಗಿಲ್ಲ. ರೈತರ ಬದುಕಿಗೆ ಆರ್ಥಿಕವಾಗಿ ಹಿನ್ನಡೆಯಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಶಾಸಕರ ಮನವಿಗೆ ಸ್ಪಂದಿಸಿರುವ ಸಚಿವರು, ಶೀಘ್ರದಲ್ಲಿಯೇ ಬಾಕಿ ಹಣ ಬಿಡುಗಡೆ ಮಾಡುವಂತೆ ಕಾವೇರಿ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಿಗೆ ಸೂಚನೆ ನೀಡಿದರು. ಶೀಘ್ರದಲ್ಲೇ ತಾಲ್ಲೂಕಿಗೆ ಭೇಟಿ ನೀಡುವುದಾಗಿ ರಾಮಲಿಂಗಾ ರೆಡ್ಡಿ ಅವರು ಭರವಸೆ ನೀಡಿದ್ದಾರೆ.

## ನಡು ರಸ್ತೆಯಲ್ಲಿ ಹೊತ್ತಿ ಉರಿದ ಲಾರಿ



• ಪ್ರಜೋದಯ ವರದಿ

**ಬೇಲೂರು :** ಕಲ್ಲಿದ್ದಲು ಸಾಗಿಸುತ್ತಿದ್ದ ಲಾರಿಗೆ ಏಕಾಏಕಿ ಬೆಂಕಿ ಹೊತ್ತಿಕೊಂಡಿರುವ ಘಟನೆ ತಾಲ್ಲೂಕಿನ ಹೆಬ್ಬಾಳು ಸಮೀಪದ ಬೇಲೂರು-ಹಳೇಬೀಡು ರಸ್ತೆಯಲ್ಲಿ ಸೋಮವಾರ ನಡೆದಿದೆ.

ಮಂಗಳೂರಿನಿಂದ ಹಿರಿಯೂರು ಕಡೆಗೆ ಕಲ್ಲಿದ್ದಲು ತುಂಬಿಕೊಂಡು ಲಾರಿ ಚಲಿಸುತ್ತಿದ್ದಾಗಲೇ ಲಾರಿ ಮುಂಭಾಗ ಬೆಂಕಿ ಕಾಣಿಸಿಕೊಂಡಿದೆ. ಚಾಲಕ ಮತ್ತು ಕ್ಲೀನರ್ ತಕ್ಷಣ ಕೆಳಗಳಿದಿದ್ದು, ಕ್ಷಣಾರ್ಧದಲ್ಲಿ ಬೆಂಕಿ ವ್ಯಾಪಿಸಿ ಮುಂಭಾಗ ಸಂಪೂರ್ಣ ಸುಟ್ಟು ಕರಕಲಾಗಿದೆ.

ಸ್ಥಳಕ್ಕಾಗಮಿಸಿದ ಅಗ್ನಿಶಾಮಕ ದಳದ ಸಿಬ್ಬಂದಿ ಬೆಂಕಿ ನಂದಿಸಿ ನಿಯಂತ್ರಣಕ್ಕೆ ತಂದರೂ ಲಾರಿ ಮುಂಭಾಗ ಪೂರ್ತಿ ಸುಟ್ಟು ಹೋಗಿದೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲಿಸಿದರು.

## ನಾಲೆಗೆ ಬಿದ್ದ ಟ್ರ್ಯಾಕ್ಟರ್: ಚಾಲಕ ಸಾವು




• ಪ್ರಜೋದಯ ವರದಿ

**ಹೊಳೆನರಸೀಪುರ:** ಹೇಮಾವತಿ ನಾಲೆಗೆ ಟ್ರ್ಯಾಕ್ಟರ್ ಮಗುಚಿ ಬಿದ್ದ ಪರಿಣಾಮ ಚಾಲಕ ಸ್ಥಳದಲ್ಲೇ ಮೃತಪಟ್ಟ ಘಟನೆ ತಾಲ್ಲೂಕಿನ ಬೆಟ್ಟದ ಸಾತೇನಹಳ್ಳಿ ಗ್ರಾಮದ ಸಮೀಪ ಸೋಮವಾರ ನಡೆದಿದೆ.

ಹನುಮಂತ (23) ಮೃತ ಚಾಲಕ. ಹುಬ್ಬಳ್ಳಿಯಿಂದ ಕೆಲಸದ ನಿಮಿತ್ತ ಬಂದಿದ ಹನುಮಂತ ಕಳೆದ ಕೆಲವು ದಿನಗಳಿಂದ ಟ್ರ್ಯಾಕ್ಟರ್ ಚಾಲನೆ ಮಾಡಿಕೊಂಡಿದ್ದ. ಸೋಮವಾರ ಕೆಸರಿನಲ್ಲಿ ಸಿಲುಕಿಕೊಂಡಿದ್ದ ಮತ್ತೊಂದು ಟ್ರ್ಯಾಕ್ಟರ್‌ನ್ನು ಮೇಲಕ್ಕೆ ಎಳೆಯುವ ಕೆಲಸವನ್ನು ಮುಗಿಸಿದ ಬಳಿಕ ಹನುಮಂತ ಟ್ರ್ಯಾಕ್ಟರ್‌ನ್ನು ಚಾಲನೆ ಮಾಡಿಕೊಂಡು ಹಿಂದಿರುಗುತ್ತಿದ್ದಾಗ ಏಕಾಏಕಿ ನಿಯಂತ್ರಣ ತಪ್ಪಿ ರಸ್ತೆ ಬದಿಯ ಹೇಮಾವತಿ ನಾಲೆಗೆ ಟ್ರ್ಯಾಕ್ಟರ್ ಪಲ್ಟಿಯಾಗಿದೆ. ಅಪಘಾತದ ರಭಸಕ್ಕೆ ಟ್ರ್ಯಾಕ್ಟರ್‌ನಡಿ ಸಿಲುಕಿದ ಹನುಮಂತ ಗಂಭೀರವಾಗಿ ಗಾಯಗೊಂಡು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಸ್ಥಳೀಯರು ರಕ್ಷಣೆಗೆ ಮುಂದಾದರೂ ಪ್ರಯೋಜನವಾಗಲಿಲ್ಲ. ನಗರ ಪೊಲೀಸ್ ಠಾಣೆಯ ಪೊಲೀಸರು ಪರಿಶೀಲನೆ ನಡೆಸಿ, ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಿದರು.

## ರಸ್ತೆ ವಿಭಜಕಕ್ಕೆ ಲಾರಿ ಡಿಕ್ಕಿ

• ಪ್ರಜೋದಯ ವರದಿ



**ಸಕಲೇಶಪುರ:** ತಾಲ್ಲೂಕಿನಲ್ಲಿ ಗಾಳಿ ಸಹಿತ ಸುರಿದ ಭಾರೀ ಮಳೆಯ ನಡುವೆ ಇಟ್ಟಿಗೆ ಸಾಗಿಸುತ್ತಿದ್ದ ಲಾರಿಯೊಂದು ಚಾಲಕನ ನಿಯಂತ್ರಣ ತಪ್ಪಿ ರಸ್ತೆ ವಿಭಜಕಕ್ಕೆ ಡಿಕ್ಕಿ ಹೊಡೆದ ಘಟನೆ ಆನೆಮಹಲ್ ಸಮೀಪ ನಡೆದಿದೆ.

ಮಂಗಳೂರಿನಿಂದ ಬೆಂಗಳೂರಿನತ್ತ ಇಟ್ಟಿಗೆ ಸಾಗಿಸುತ್ತಿದ್ದ ವೇಳೆ ಲಾರಿಯ ಆ್ಯಕ್ಸಲ್ ಕಟ್ ಆಗಿ ರಸ್ತೆ ಮಧ್ಯದ ವಿಭಜಕಕ್ಕೆ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ರಸ್ತೆ ವಿಭಜಕಕ್ಕೆ ಹಾನಿಯಾಗಿದ್ದು, ಕೆಲಕಾಲ ವಾಹನ ಸಂಚಾರಕ್ಕೂ ಅಡಚಣೆ ಉಂಟಾಯಿತು. ಪಟ್ಟಣ ಠಾಣೆ ಪೊಲೀಸರು ವಾಹನ ತೆರವುಗೊಳಿಸಿ ಸಂಚಾರಕ್ಕೆ ಅನುವು ಮಾಡಿಕೊಟ್ಟರು.

## ಜಿಲ್ಲೆಗಿಂದು ಡಿಜಿ-ಐಜಿಪಿ ಭೇಟಿ



**ಹಾಸನ:** ರಾಜ್ಯ ಪೊಲೀಸ್ ಮಹಾ ನಿರ್ದೇಶಕ ಎಂ.ಎ. ಸಲೀಂ ಅವರು ಮಂಗಳವಾರ ಬೆಳಿಗ್ಗೆ ಜಿಲ್ಲೆಗೆ ಆಗಮಿಸಲಿದ್ದಾರೆ.

ಪೊಲೀಸ್ ಗೌರವ ವಂದನೆ ಸ್ವೀಕರಿಸಿದ ಬಳಿಕ, ದಕ್ಷಿಣ ವಲಯ ಐಜಿಪಿ ಡಾ.ಬೋರಲಿಂಗಯ್ಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭನ್ವಿತಾ, ಎಎಸ್ಪಿ, ಡಿವೈಎಸ್ಪಿ, ಇನ್‌ಸ್ಪೆಕ್ಟರ್ ಹಾಗು ಪಿಎಸ್‌ಐ ಅವರೊಂದಿಗೆ ಜಿಲ್ಲೆಯ ವಿವಿಧ ಅಪರಾಧಗಳ ಬಗ್ಗೆ ಪರಿಶೀಲನೆ ನಡೆಸಲಿದ್ದಾರೆ.

ನಂತರ ಡಿಎಆರ್, ಶಾಂತಿಗ್ರಾಮ ಬಳಿಯ ಗಾಡೇನಹಳ್ಳಿಯಲ್ಲಿರುವ ಪೊಲೀಸ್ ತರಬೇತಿ ಶಾಲೆಗೆ ಭೇಟಿ ನೀಡಿ ಪರಿಶೀಲನೆ ನಡೆಸಲಿದ್ದಾರೆ.

## ತಡೆಗೋಡೆ ಕುಸಿತ : ತನಿಖೆಗೆ ಸಂಸದ ಶ್ರೇಯಸ್ ಸೂಚನೆ

• ಪ್ರಜೋದಯ ವರದಿ

**ಸಕಲೇಶಪುರ:** ಪಟ್ಟಣ ಸಮೀಪದ ಅರೇಹಳ್ಳಿ ಬೀದಿಯ ಡಾಲರ್ಸ್ ಕಾಲೋನಿಯಲ್ಲಿ ಧಾರಾಕಾರ ಮಳೆಯಿಂದ ತಡೆಗೋಡೆ ಕುಸಿದು ಎರಡು ಮನೆಗಳಿಗೆ ಹಾನಿಯಾದ ಸ್ಥಳಕ್ಕೆ ಸೋಮವಾರ ಸಂಸದ ಶ್ರೇಯಸ್ ಪಾಟೀಲ್ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಹಾನಿಗೊಳಗಾದ ಯೂಸುಫ್ ಹಾ, ಮಧು ಅವರ ಮನೆಗಳಿಗೆ ಭೇಟಿ ನೀಡಿದ ಅವರು, ಕುಟುಂಬ ಸದಸ್ಯರಿಂದ ಘಟನೆ ಕುರಿತು ಮಾಹಿತಿ ಪಡೆದು ಅಧಿಕಾರಿಗಳೊಂದಿಗೆ ಸ್ಥಳ ಪರಿಶೀಲಿಸಿದರು. ಬಳಿಕ ಮಾತನಾಡಿದ ಸಂಸದರು, ತಡೆಗೋಡೆ ಕುಸಿತದಿಂದ ಎರಡು ಮನೆಗಳ ಅಡುಗೆಮನೆ, ಮಲಗುವ ಕೊಠಡಿ, ಶೌಚಾಲಯ ಸೇರಿ ಹಲವು ಭಾಗಗಳು ಸಂಪೂರ್ಣ ಹಾನಿಗೊಳಗಾಗಿವೆ. ಘಟನೆ ನಡೆದ ವೇಳೆ ಆ ಭಾಗದಲ್ಲಿ ಯಾರೂ ಇಲ್ಲದಿದ್ದ ಕಾರಣ ಸಂಭವಿಸಬಹುದಾಗಿದ್ದ ದೊಡ್ಡ ಅನಾಹುತ ತಪ್ಪಿದೆ ಎಂದು ಹೇಳಿದರು.



ಸಂತ್ರಸ್ತ ಕುಟುಂಬಗಳಿಗೆ ಸರ್ಕಾರದಿಂದ ದೊರೆಯುವ ಪರಿಹಾರವನ್ನು ತ್ವರಿತವಾಗಿ ಒದಗಿಸುವಂತೆ ತಹಶೀಲ್ದಾರ್ ಹಾಗು ಉಪ ವಿಭಾಗಾಧಿಕಾರಿಗಳಿಗೆ ಸೂಚಿಸಲಾಗಿದೆ. ಅಗತ್ಯವಿದ್ದರೆ ಪರ್ಯಾಯ ವಸತಿ, ಆಹಾರ ಹಾಗು ಇತರೆ ಮೂಲಭೂತ ಸೌಲಭ್ಯಗಳನ್ನು ತಾಲೂಕು ಆಡಳಿತದಿಂದ ಕಲ್ಪಿಸಲಾಗುವುದೆಂದು ಭರವಸೆ ನೀಡಿದರು.

ಲೇಔಟ್ ಅಭಿವೃದ್ಧಿ ಪಡಿಸುತ್ತಿರುವ ಸಂಸ್ಥೆಯ ಮಾಲೀಕರನ್ನು ಅಧಿಕಾರಿಗಳು ಹಾಗು ಮನೆ ಮಾಲೀಕರೊಂದಿಗೆ ಮಾತುಕತೆಗೆ ಕರೆಸಿ ಸಮಸ್ಯೆ ಬಗೆಹರಿಸುವಂತೆ ಸೂಚಿಸಲಾಗಿದೆ. ಒಂದು ವೇಳೆ ಪರಿಹಾರ ಕಂಡುಬರದಿದ್ದರೆ ಕಾನೂನು ಪ್ರಕಾರ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಎಚ್ಚರಿಸಿದರು.

> ಡಿವೈಎಸ್‌ಪಿ ಹಾಗು ಉಪ ವಿಭಾಗಾಧಿಕಾರಿ ನೇತೃತ್ವದಲ್ಲಿ ವಿಶೇಷ ತನಿಖಾ ತಂಡ ರಚಿಸಿ ಪ್ರಕರಣದ ಸಮಗ್ರ ತನಿಖೆ ನಡೆಸಲಾಗುವುದು. ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು.
> -ಶ್ರೇಯಸ್ ಪಟೇಲ್, ಸಂಸದ

ಪ್ರಾಥಮಿಕ ಪರಿಶೀಲನೆಯಲ್ಲಿ ಹಲವು ಕಾನೂನು ಲೋಪಗಳು ಕಂಡು ಬಂದಿರುವುದು ಗಮನಕ್ಕೆ ಬಂದಿದೆ. ತಡೆಗೋಡೆ ನಿರ್ಮಾಣಕ್ಕೆ ಅಗತ್ಯ ಅನುಮತಿ ಹಾಗು ನಿಯಮಗಳನ್ನು ಪಾಲಿಸಲಾಗಿದೆಯೇ ಎಂಬುದರ ಕುರಿತು ಪರಿಶೀಲನೆ ನಡೆಸಲಾಗುವುದು. ಟೌನ್ ಪ್ಲಾನಿಂಗ್‌ನಿಂದ ಶಾಶ್ವತ ಅನುಮೋದನೆ ದೊರೆತಿಲ್ಲವೆಂಬ ಮಾಹಿತಿಯೂ ಲಭ್ಯವಾಗಿದ್ದು, ಈ ಕುರಿತು ಅಧಿಕಾರಿಗಳು ತನಿಖೆ ನಡೆಸಲಿದ್ದಾರೆಂದು ಹೇಳಿದರು.

ಸಕಲೇಶಪುರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಸಯ್ಯದ್ ಮುಫೀಜ್, ಉಪ ವಿಭಾಗಾಧಿಕಾರಿ ಹುಲ್ಲುಮನೆ ತಿಮ್ಮಣ್ಣ, ತಹಶೀಲ್ದಾರ್ ಸುಪ್ರೀತಾ, ತಾಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿ ಗಂಗಾಧರ್, ಪುರಸಭೆ ಮುಖ್ಯಾಧಿಕಾರಿ ಮಹೇಶ್ವರಪ್ಪ, ಕಾಂಗ್ರೆಸ್ ಮುಖಂಡರಾದ ಬೈಕೆರೆ ದೇವರಾಜ್, ಪ್ರಶಾಂತ್ ಕಲ್ಗನೆ ಹಾಜರಿದ್ದರು.


## ಸಾರ್ವಜನಿಕರ ಅಹವಾಲು ಆಲಿಸಿದ ಸಂಸದ

• ಪ್ರಜೋದಯ ವರದಿ

**ಹಾಸನ:** ಸಂಸದ ಶ್ರೇಯಸ್ ಪಟೇಲ್ ಅವರು ಸೋಮವಾರ ತಮ್ಮ ಕಚೇರಿಯಲ್ಲಿ ಸಾರ್ವಜನಿಕರನ್ನು ಭೇಟಿ ಮಾಡಿ ಅಹವಾಲುಗಳನ್ನು ಸ್ವೀಕರಿಸಿ, ಸಮಸ್ಯೆಗಳನ್ನು ಆಲಿಸಿದರು.

ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸಿದ್ದ ಸಾರ್ವಜನಿಕರು ಕುಡಿಯುವ ನೀರು, ರಸ್ತೆ, ವಿದ್ಯುತ್, ವಸತಿ, ಕಂದಾಯ, ಪಿಂಚಣಿ, ಶಿಕ್ಷಣ, ಆರೋಗ್ಯ ಸೇರಿ ವಿವಿಧ ಇಲಾಖೆಗಳ ವ್ಯಾಪ್ತಿಗೆ ಬರುವ ಸಮಸ್ಯೆಗಳ ಕುರಿತು ಮನವಿ ಸಲ್ಲಿಸಿದರು.

ಸಮಸ್ಯೆಗಳ ಸ್ವರೂಪವನ್ನು ಪರಿಶೀಲಿಸಿದ ಅವರು, ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ದೂರವಾಣಿ ಮೂಲಕ ಚರ್ಚಿಸಿ, ಅಗತ್ಯ ಕ್ರಮಗಳನ್ನು ತ್ವರಿತವಾಗಿ ಕೈಗೊಳ್ಳುವಂತೆ ಸೂಚಿಸಲಾಯಿತು. ಬಾಕಿ ಉಳಿದಿರುವ ಪ್ರಕರಣಗಳನ್ನು ಆದ್ಯತೆಯ ಮೇರೆಗೆ ಇತ್ಯರ್ಥಗೊಳಿಸಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ಕಾರ್ಯನಿರ್ವಹಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.



ಈ ವೇಳೆ ಮಾತನಾಡಿದ ಅವರು, ಜನಪ್ರತಿನಿಧಿಯಾಗಿ ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವುದು ನನ್ನ ಮೊದಲ ಆದ್ಯತೆಯಾಗಿದೆ. ಜನರು ತಮ್ಮ ಸಮಸ್ಯೆಗಳ ಪರಿಹಾರಕ್ಕಾಗಿ ವಿಶ್ವಾಸದಿಂದ ನಮ್ಮನ್ನು ಸಂಪರ್ಕಿಸುತ್ತಾರೆ. ಆ ವಿಶ್ವಾಸವನ್ನು ಉಳಿಸಿಕೊಂಡು, ಜನಸ್ನೇಹಿ ಆಡಳಿತ ಹಾಗು

» ನಾಲ್ಕನೇ ಪುಟದಲ್ಲಿ

## ಅಪಘಾತ: ಯುವಕ ಸಾವು

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಟಾಟಾ ಏಸ್ ಗೂಡ್ಸ್ ವಾಹನಕ್ಕೆ ಬೈಕ್ ಡಿಕ್ಕಿಯಾಗಿ ಸವಾರ ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ರಾಷ್ಟ್ರೀಯ ಹೆದ್ದಾರಿ 75ರ ಹಿರೀಸಾವೆ ಅಮ್ಮ ಕುಟೀರದ ಬಳಿ ಸೋಮವಾರ ನಡೆದಿದೆ.

ಬೆಂಗಳೂರಿನ ಎಂ.ಎಸ್.ಪಾಳ್ಯದ ಸುಬ್ರಹ್ಮಣ್ಯ ಅವರ ಪುತ್ರ ಸುಹಾಸ್ (23) ಮೃತ ಯುವಕ. ಹಾಸನದಿಂದ ಬೈಕ್‌ನಲ್ಲಿ ಬೆಂಗಳೂರಿಗೆ ಹೋಗುತ್ತಿದ್ದಾಗ ಮುಂದೆ ಹೊರಟಿದ್ದ ಗೂಡ್ಸ್ ವಾಹನಕ್ಕೆ ಡಿಕ್ಕಿಯಾಗಿದೆ. ತಲೆಗೆ ತೀವ್ರ ಪೆಟ್ಟು ಬಿದ್ದ ಪರಿಣಾಮ ರಕ್ತಸ್ರಾವವಾಗಿ ಸ್ಥಳದಲ್ಲೇ ಮೃತಪಟ್ಟಿದ್ದಾನೆ.

## ಜು.10 ರಂದು ಜಿಲ್ಲಾಧಿಕಾರಿ ಕಚೇರಿಗೆ ಅಂಗನವಾಡಿ ನೌಕರರ ಮುತ್ತಿಗೆ




• ಪ್ರಜೋದಯ ವರದಿ

**ಹಾಸನ:** ಅಂಗನವಾಡಿ ಹಾಗು ಅಕ್ಷರ ದಾಸೋಹ ನೌಕರರಿಗೆ ಗೌರವಧನ ಹೆಚ್ಚಳ ಮಾಡದಿರುವುದನ್ನು ಖಂಡಿಸಿ ಜು.10 ರಂದು ಕೆಲಸ ಸ್ಥಗಿತಗೊಳಿಸಿ ಜಿಲ್ಲಾಧಿಕಾರಿ ಕಚೇರಿಗೆ ಮುತ್ತಿಗೆ ಹಾಕುವ ಮೂಲಕ ರಾಜ್ಯಾದ್ಯಂತ ಕಪ್ಪು ದಿನ ಆಚರಿಸಲಾಗುವುದೆಂದು ಸಿಐಟಿಯು ರಾಜ್ಯ ಸಮಿತಿ ಪ್ರಧಾನ ಕಾರ್ಯದರ್ಶಿ ಎಸ್.ವರಲಕ್ಷ್ಮಿ ಅವರು ತಿಳಿಸಿದರು.

ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಅಂಗನವಾಡಿ, ದಾಸೋಹ ನೌಕರರನ್ನು ದುರ್ಬಲಗೊಳಿಸುವ ನೀತಿ ಅನುಸರಿಸುತ್ತಿವೆ. ಅಂಗನವಾಡಿಗಳಿಗೆ ಅಗತ್ಯ

» ನಾಲ್ಕನೇ ಪುಟದಲ್ಲಿ

## ಜುಲೈ ಅಂತ್ಯಕ್ಕೆ ಪೂರ್ಣಗೊಳ್ಳುವ ವಿಶ್ವಾಸ | ನೆರವು ಕಲ್ಪಿಸುವ ಉದ್ದೇಶ

# ಭೂ ರಹಿತ ಹೈನುಗಾರರ ಸರ್ವೆಗೆ ಮುಂದಾದ ಇಲಾಖೆ

-ಮಲ್ಲಿಕಾರ್ಜುನ ಕೊಚ್ಚರಗಿ

• ಪ್ರಜೋದಯ ವರದಿ

**ಹಾಸನ:** ಜಿಲ್ಲೆಯಲ್ಲಿ ಹೈನುಗಾರಿಕೆಗೆ ಪುಷ್ಟಿ ನೀಡುವ ಉದ್ದೇಶದಿಂದ ಭೂ ರಹಿತ ಹೈನುಗಾರರ ಸಮೀಕ್ಷೆಗೆ ಪಶು ಸಂಗೋಪನಾ ಇಲಾಖೆ ಮುಂದಾಗಿದೆ.

ವ್ಯವಸಾಯದೊಂದಿಗೆ ಹೈನುಗಾರಿಕೆಯನ್ನು ಉಪ ಕಸುಬಾಗಿಸಿಕೊಂಡವರು ಹೆಚ್ಚಿನ ತೊಂದರೆ ಎದುರಿಸುವುದಿಲ್ಲ. ತಮ್ಮದೇ ಸ್ವಂತ ಜಮೀನಿನಲ್ಲಿ ಅಗತ್ಯ ಮೇವು ಹಾಗು ಇತರ ಸೌಕರ್ಯಗಳಿರುತ್ತವೆ. ಆದರೆ, ಜಮೀನು ಇಲ್ಲದೆ ರಾಸುಗಳನ್ನು ಸಾಕಿ ಹೈನುಗಾರಿಕೆ ಮೂಲಕ ಕುಟುಂಬ ನಿರ್ವಹಣೆ ಮಾಡುವ ಕುಟುಂಬಗಳು ಅಧಿಕ ಪ್ರಮಾಣದಲ್ಲಿವೆ. ಅಂತಹವರನ್ನು ಗುರುತಿಸಿ ಅಗತ್ಯ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಯೋಜನೆಯೊಂದನ್ನು ಪಶುಪಾಲನಾ ಇಲಾಖೆ ಉಪನಿರ್ದೇಶಕ ಬಿ.ಕೆ.ರಮೇಶ್ ಅವರು ಕೈಗೆತ್ತಿಕೊಂಡಿದ್ದಾರೆ.



**ರಾಜ್ಯದಲ್ಲೇ ಮೊದಲ ಪ್ರಯತ್ನ**

ಭೂ ರಹಿತ ಹೈನುಗಾರರಿಗೆ ನೆರವಾಗಬೇಕೆಂಬ ಉದ್ದೇಶದಿಂದ ಕೈಗೆತ್ತಿಕೊಂಡಿರುವ ಪರಿಕಲ್ಪನೆ ಅಂದುಕೊಂಡ ಹಾಗೆ ಸಾಕಾರವಾದರೆ ಅದರ ಸಂಪೂರ್ಣ ಯಶಸ್ಸು ಜಿಲ್ಲೆಗೆ ದೊರೆಯಲಿದೆ. ಜಿಲ್ಲೆಯಲ್ಲಿ ಪ್ರಸ್ತುತ 5.41 ಲಕ್ಷ ರಾಸುಗಳಿದ್ದು, ಜಾನುವಾರುಗಳ ಸಂಖ್ಯೆಯಲ್ಲಿ ಬೆಳಗಾವಿ ಮೊದಲ ಸ್ಥಾನದಲ್ಲಿ, ಹಾಸನ ಎರಡನೇ ಸ್ಥಾನದಲ್ಲಿದೆ. ನಿತ್ಯ 15 ರಿಂದ 18 ಲಕ್ಷ ಲೀಟರ್ ಹಾಲು ಸಂಗ್ರಹವಾಗುತ್ತಿದೆ.

ಗ್ರಾಮೀಣ ಜನರು ಹೈನುಗಾರಿಕೆಯಿಂದಲೇ ಬದುಕು ಕಟ್ಟಿಕೊಂಡಿದ್ದಾರೆ. ಭೂ ರಹಿತರು ಮೇವಿಗಾಗಿ ಇನ್ನೊಬ್ಬರ ಬಳಿ ಅಂಗಲಾಚುವ ಪರಿಸ್ಥಿತಿ ಇದೆ. ಪ್ರಸ್ತುತ 3.5 ಲಕ್ಷ ಕುಟುಂಬಗಳು ಜಿಲ್ಲೆಯಲ್ಲಿ ರಾಸುಗಳ ಸಾಕಾಣಿಕೆಯಲ್ಲಿ ತೊಡಗಿವೆ. ಅದರಲ್ಲಿ ಕನಿಷ್ಟ 1 ಲಕ್ಷ ಕುಟುಂಬಗಳು ಭೂ ರಹಿತರು ಎಂದು ಅಂದಾಜಿಸಲಾಗಿದೆ. ಈ ಕುರಿತು ನಿಖರ ಮಾಹಿತಿ ಲಭ್ಯವಾದರೆ ಅದನ್ನು ಸರ್ಕಾರಕ್ಕೆ ಸಲ್ಲಿಸುವ ಯೋಜನೆಯನ್ನು ಅಧಿಕಾರಿಗಳು ಹಾಕಿಕೊಂಡಿದ್ದಾರೆ. ಈ ನಿಟ್ಟಿನಲ್ಲಿ ಈಗಾಗಲೇ ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರ, ಹಾಗು ಪಶು ಸಖಿಯರಿಂದ ಸರ್ವೆ ಪ್ರಾರಂಭಿಸಲಾಗಿದೆ. ಜುಲೈ ಅಂತ್ಯದ ವೇಳೆಗೆ ನಿಖರ ಅಂಕಿ ಅಂಶ ಅಧಿಕಾರಿಗಳ ಕೈ ಸೇರಲಿದೆ.

**ಹೈನುಗಾರರಿಗೆ ಏನು ಲಾಭ**

ಹೈನುಗಾರಿಕೆಯನ್ನೇ ನಂಬಿ ಬದುಕು ಕಟ್ಟಿಕೊಂಡಿರುವವರು ಮೇವಿಗಾಗಿ ಪರದಾಡುತ್ತಿರುವುದು ಒಂದೆಡೆಯಾದರೆ ಅದಕ್ಕೆ ಹಾಕುವ ಆಹಾರ ಪದಾರ್ಥವನ್ನು ದುಬಾರಿ ಬೆಲೆ ಕೊಟ್ಟು ಖರೀದಿಸಬೇಕು. ರಾಸುಗಳ ಆರೋಗ್ಯ ನಿರ್ವಹಣೆ, ವಿಮೆ ಮುಂತಾದ ಸೌಲಭ್ಯಗಳು ಸಿಗುವುದು ಅಪರೂಪ. ಅಕಾಲಿಕವಾಗಿ ಜಾನುವಾರುಗಳು ಮೃತಪಟ್ಟರೆ ರಾಜ್ಯ ಸರ್ಕಾರ ಅನುಗ್ರಹ ಯೋಜನೆಯಡಿ ಪರಿಹಾರ ನೀಡುತ್ತಿದೆಯಾದರೂ ಕಳೆದ ನಾಲ್ಕು ವರ್ಷಗಳಿಂದ ಹಣ ಬಿಡುಗಡೆಯಾಗದೆ ಸಮಸ್ಯೆಯಾಗಿದೆ. ಇಂತಹ ಪರಿಸ್ಥಿತಿಯಲ್ಲಿ ಕೇವಲ ಹೈನುಗಾರಿಕೆಯನ್ನೇ ನಂಬಿರುವ ಭೂರಹಿತ ಕುಟುಂಬಸ್ಥರು ತೊಂದರೆ ಅನುಭವಿಸುತ್ತಾರೆ. ಆದ್ದರಿಂದ ಅಂತಹವರಿಗೆ ವಿಶೇಷ ಸೌಲಭ್ಯ ಕಲ್ಪಿಸುವುದು ಸರ್ವೆಯ ಉದ್ದೇಶ. ಜಿಲ್ಲೆಯಲ್ಲಿ 33 ಪಶು ಆಸ್ಪತ್ರೆ, 1 ಪಾಲಿ ಕ್ಲಿನಿಕ್, 108 ಪಶು ಚಿಕಿತ್ಸಾಲಯ, 72 ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರಗಳಿದ್ದು, ಈ ಮೂಲಕ ಸರ್ವೆ ಕಾರ್ಯ ನಡೆಯುತ್ತಿದೆ.

**ಜಾನುವಾರುಗಳ ಮಾಹಿತಿ**

ಆಲೂರು ತಾಲ್ಲೂಕಿನಲ್ಲಿ 29,766, ಅರಕಲಗೂಡು 73,722, ಅರಸೀಕೆರೆ 88,541, ಬೇಲೂರು 56,538, ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿ 74,286, ಹಾಸನದಲ್ಲಿ 92, 464, ಹೊಳೆನರಸೀಪುರದಲ್ಲಿ 55,789 ಹಾಗು ಸಕಲೇಶಪುರದಲ್ಲಿ 21,922 ಹಸುಗಳಿವೆ. ಆಲೂರಿನಲ್ಲಿ 555, ಅರಕಲಗೂಡು 6380, ಅರಸೀಕೆರೆ 5777, ಬೇಲೂರು 1926, ಚನ್ನರಾಯಪಟ್ಟಣ 36,317, ಹಾಸನದಲ್ಲಿ 3,570, ಹೊಳೆನರಸೀಪುರ 11,473 ಹಾಗು ಸಕಲೇಶಪುರದಲ್ಲಿ 2,011 ಎಮ್ಮೆಗಳಿವೆ.

# ಗುಡಿಸಲು ನಿವಾಸಿಗಳಿಗೆ ಶೀಘ್ರದಲ್ಲೇ ನಿವೇಶನ ಹಂಚಿಕೆ

## ಸರ್ಕಾರಿ ಜೂನಿಯರ್ ಕಾಲೇಜು ಆವರಣವನ್ನು ಮುಕ್ತಗೊಳಿಸಲಾಗುವುದು: ಶಾಸಕ ಹೆಚ್.ಕೆ.ಸುರೇಶ್

• ಪ್ರಜೋದಯ ವರದಿ




**ಬೇಲೂರು:** ಪಟ್ಟಣದ ಸರ್ಕಾರಿ ಜೂನಿಯರ್ ಕಾಲೇಜಿನ ಹಿಂಭಾಗದಲ್ಲಿರುವ ಗುಡಿಸಲುಗಳನ್ನು ಒಂದು ತಿಂಗಳೊಳಗೆ ತೆರವುಗೊಳಿಸಿ, ಅಲ್ಲಿನ ನಿವಾಸಿಗಳಿಗೆ ನಿವೇಶನಗಳನ್ನು ಹಂಚಿಕೆ ಮಾಡುವ ಮೂಲಕ ಕಾಲೇಜು ಆವರಣವನ್ನು ಗುಡಿಸಲು ಮುಕ್ತಗೊಳಿಸಲಾಗುವುದು ಎಂದು ಶಾಸಕ ಹೆಚ್.ಕೆ. ಸುರೇಶ್ ಅವರು ಹೇಳಿದರು.

ಪಟ್ಟಣದ ಸರ್ಕಾರಿ ಜೂನಿಯರ್ ಕಾಲೇಜು ಸಭಾಂಗಣದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಪ್ರಥಮ ಪಿಯುಸಿ ವಿದ್ಯಾರ್ಥಿಗಳ ಸ್ವಾಗತ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕಳೆದ ಮೂರು ದಶಕಗಳಿಂದ ಜೂನಿಯರ್ ಕಾಲೇಜಿನ ಹಿಂಭಾಗದಲ್ಲಿರುವ ಗುಡಿಸಲುಗಳು ಕಾಲೇಜಿನ ಅಭಿವೃದ್ಧಿಗೆ ತೊಡಕಾಗಿದ್ದವು. ಈ ಸಮಸ್ಯೆ ಪರಿಹಾರಕ್ಕಾಗಿ ಅನೇಕ ಸಂಘಟನೆಗಳು, ಸಾರ್ವಜನಿಕರು ಹಾಗೂ ಶಿಕ್ಷಣಾಭಿಮಾನಿಗಳು ನಿರಂತರವಾಗಿ ಹೋರಾಟ ನಡೆಸಿದ್ದರು. ಅವರ ಪ್ರಯತ್ನದ ಫಲವಾಗಿ ಹಾಗೂ ಜನಪ್ರತಿನಿಧಿಗಳು ಮತ್ತು ಸಾರ್ವಜನಿಕರ ಸಹಕಾರದಿಂದ ಈಗ ಸಮಸ್ಯೆ ಪರಿಹಾರದ ಹಂತಕ್ಕೆ ಬಂದಿದೆ ಎಂದು ಹೇಳಿದರು.

ಗುಡಿಸಲು ನಿವಾಸಿಗಳಿಗೆ ಪಟ್ಟಣದ ರಾಯಪುರ ಸಮೀಪದಲ್ಲಿ 65 ನಿವೇಶನಗಳನ್ನು ಮಂಜೂರು ಮಾಡಲು ಅಗತ್ಯ ಕಾನೂನು ಪ್ರಕ್ರಿಯೆಗಳು ಪೂರ್ಣಗೊಂಡಿವೆ. ಸರ್ಕಾರದ ಅಂತಿಮ ಅನುಮೋದನೆ ದೊರೆತ ಕೂಡಲೇ ಒಂದು ತಿಂಗಳೊಳಗೆ ನಿವೇಶನಗಳನ್ನು ಹಂಚಿಕೆ ಮಾಡಿ, ಗುಡಿಸಲುಗಳನ್ನು ತೆರವುಗೊಳಿಸುವ ಕಾರ್ಯ ಕೈಗೊಳ್ಳಲಾಗುವುದು ಎಂದ ಅವರು, ಶಿಕ್ಷಣವೇ ವ್ಯಕ್ತಿಯ ಬದುಕನ್ನು ರೂಪಿಸುವ ಪ್ರಮುಖ ಸಾಧನವಾಗಿದ್ದು, ಶಿಕ್ಷಣದ ಮೂಲಕವೇ ಜಗತ್ತನ್ನು ಗೆಲ್ಲಲು ಸಾಧ್ಯ. ಶಿಕ್ಷಣಕ್ಕೆ ಜಾತಿ, ಧರ್ಮ ಅಥವಾ ಇತರ ಭೇದ ಭಾವಗಳನ್ನು ಅಂಟಿಸಬಾರದು. ವಿದ್ಯಾರ್ಥಿಗಳಿಗೆ ಸರ್ಕಾರ ನೀಡುವ ಸೌಲಭ್ಯಗಳು ಯಾವುದೇ ತಾರತಮ್ಯವಿಲ್ಲದೆ ತಲುಪಬೇಕು. ಶಿಕ್ಷಣ ಕ್ಷೇತ್ರಕ್ಕೆ ಸರ್ಕಾರ ಇನ್ನಷ್ಟು ಉತ್ತೇಜನ ನೀಡುವ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟರು.

ಪ್ರೌಢಶಾಲೆ ಹಾಗೂ ಪದವಿ ಪೂರ್ವ ಶಿಕ್ಷಣದ ಹಂತದಲ್ಲಿ ವಿದ್ಯಾರ್ಥಿಗಳ ಮನಸ್ಸು ಸಹಜವಾಗಿಯೇ ಚಂಚಲವಾಗಿರುತ್ತದೆ. ಇಂತಹ ಸಂದರ್ಭದಲ್ಲಿ ವಿದ್ಯಾರ್ಥಿಗಳು ಏಕಾಗ್ರತೆಯಿಂದ ವಿದ್ಯಾಭ್ಯಾಸದ ಕಡೆ ಗಮನಹರಿಸಿ, ದುಶ್ಚಟಗಳಿಂದ ದೂರವಿದ್ದು, ಪೋಷಕರನ್ನು ಹಾಗೂ ಶಿಕ್ಷಕರನ್ನು ಗೌರವಿಸಿದರೆ ಉತ್ತಮ ಭವಿಷ್ಯ ನಿರ್ಮಿಸಿಕೊಳ್ಳಲು ಸಾಧ್ಯ ಎಂದು ಕಿವಿಮಾತು ಹೇಳಿದರು.

ಪುರಸಭೆ ಅಧ್ಯಕ್ಷ ಅಕ್ರಮ್ ಶರೀಫ್ ಅವರು ಮಾತನಾಡಿ, ಜೂನಿಯರ್ ಕಾಲೇಜಿನ ಹಿಂಭಾಗದಲ್ಲಿರುವ ಗುಡಿಸಲುಗಳ ಸಮಸ್ಯೆ ಕಳೆದ 30 ವರ್ಷಗಳಿಂದ ಮುಂದುವರಿದಿದ್ದು, ತಡೆಗೋಡೆ ಇಲ್ಲದ ಕಾರಣ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೂ ಅಡಚಣೆಯಾಗುತ್ತಿತ್ತು. ಈ ಸಮಸ್ಯೆ ಪರಿಹರಿಸುವ ನಿಟ್ಟಿನಲ್ಲಿ ಶಾಸಕ ಎಚ್.ಕೆ.ಸುರೇಶ್ ನಿರಂತರ ಸಭೆಗಳನ್ನು ನಡೆಸಿ, ಗುಡಿಸಲು ನಿವಾಸಿಗಳಿಗೆ ನಿವೇಶನ ಒದಗಿಸುವ ದೃಢ ನಿರ್ಧಾರ ಕೈಗೊಂಡಿರುವುದು ಶ್ಲಾಘನೀಯ ಎಂದರು.

ಗುಡಿಸಲುಗಳು ತೆರವುಗೊಂಡ ಬಳಿಕ ಆ ಜಾಗದಲ್ಲಿ ಕಾಲೇಜಿಗೆ ಅಗತ್ಯವಾದ ಹೆಚ್ಚುವರಿ ತರಗತಿ ಕೊಠಡಿಗಳನ್ನು ನಿರ್ಮಿಸಿ, ಉಳಿದ ಪ್ರದೇಶವನ್ನು ವಿದ್ಯಾರ್ಥಿಗಳ ಆಟದ ಮೈದಾನವಾಗಿ ಅಭಿವೃದ್ಧಿಪಡಿಸುವಂತೆ ಅವರು ಇದೇ ಸಂದರ್ಭದಲ್ಲಿ ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಸರ್ಕಾರಿ ಜೂನಿಯರ್ ಕಾಲೇಜಿನ ಪ್ರಾಂಶುಪಾಲ ಹರೀಶ್, ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯ ರಂಗನಾಥ್, ಬಿಜೆಪಿ ಮುಖಂಡರಾದ ರೇಣುಕುಮಾರ್ ಹಾಗೂ ಪೂರ್ಣೇಶ್, ಪ್ರೌಢಶಾಲೆ ಮುಖ್ಯ ಶಿಕ್ಷಕ ಹೇಮಂತ್, ಉಪನ್ಯಾಸಕ ಲಕ್ಷ್ಮೀನಾರಾಯಣ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಎಸ್ಐಆರ್‌ನಲ್ಲಿ ಅಕ್ರಮ: ಎನ್‌ಡಿಎ ನಿಯೋಗ ದೂರು

• ಪ್ರಜೋದಯ ವರದಿ



**ಬೆಂಗಳೂರು:** ರಾಜ್ಯದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಯ ಎಸ್ಐಆರ್‌ನಲ್ಲಿ ಅಕ್ರಮಗಳು ನಡೆದಿವೆ ಎಂದು ಆರೋಪಿಸಿ ಎನ್‌ಡಿಎ ನಾಯಕರ ನಿಯೋಗ ಸೋಮವಾರ ಕರ್ನಾಟಕದ ಮುಖ್ಯ ಚುನಾವಣಾಧಿಕಾರಿ ವಿ. ಅನ್ಬುಕುಮಾರ್‌ಗೆ ದೂರು ಸಲ್ಲಿಸಿತು.

ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಬಿಜೆಪಿಯ ಕೇಂದ್ರ ಸಚಿವರಾದ ಪ್ರಹ್ಲಾದ್ ಜೋಶಿ ಮತ್ತು ಶೋಭಾ ಕರಂದ್ಲಾಜೆ, ಕರ್ನಾಟಕ ವಿಧಾನಸಭೆ ಮತ್ತು ಪರಿಷತ್ತಿನ ವಿರೋಧ ಪಕ್ಷದ ನಾಯಕರಾದ ಆರ್.ಅಶೋಕ್ ಮತ್ತು ಚಲವಾದಿ ನಾರಾಯಣಸ್ವಾಮಿ ಮತ್ತು ಎರಡೂ ಪಕ್ಷಗಳ ಹಿರಿಯ ನಾಯಕರನ್ನು ಒಳಗೊಂಡ ನಿಯೋಗ ಅನ್ಬುಕುಮಾರ್ ಅವರನ್ನು ಭೇಟಿ ಮಾಡಿ ದೂರು ಸಲ್ಲಿಸಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿ ನಾಯಕರು, ಅಕ್ರಮಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಐದು ದಿನಗಳಿಂದ ಕೆಳಹಂತದ ಅಧಿಕಾರಿಗಳಿಗೆ ದೂರುಗಳನ್ನು ನೀಡಿದರೂ ಕ್ರಮ ಕೈಗೊಂಡಿಲ್ಲ. ಹೀಗಾಗಿ ಮುಖಂಡರೆಲ್ಲರೂ ಒಟ್ಟಾಗಿ ಬಂದು ಮುಖ್ಯ ಚುನಾವಣಾಧಿಕಾರಿಗೆ ದೂರು ಕೊಟ್ಟಿದ್ದೇವೆ. ಅಗತ್ಯ ಬಿದ್ದರೆ ಕೇಂದ್ರ ಚುನಾವಣಾ ಆಯೋಗಕ್ಕೂ ದೂರು ಕೊಡುತ್ತೇವೆ. ಇದುವರೆಗೂ ನಡೆದಿರುವ ಸಮೀಕ್ಷೆಯನ್ನು ರದ್ದುಪಡಿಸಿ ಮರು ಸಮೀಕ್ಷೆ ನಡೆಸಬೇಕು ಎಂದು ಆಗ್ರಹಿಸಿದ್ದೇವೆ ಎಂದರು.

ಸಂತೆ, ಮದರಸ, ಮಸೀದಿಗಳಲ್ಲಿ ಎಆರ್ ನಡೆಯುತ್ತಿದೆ. ಬಿಎಲ್‌ಒಗಳು ಮನೆಗಳಿಗೆ ಭೇಟಿ ನೀಡದೇ ಇದ್ದರೆ ನಿವಾಸಿಗಳು ಸ್ಥಳೀಯರೋ ಹೊರಗಿನವರೋ ಎಂದು ಹೇಗೆ ಗೊತ್ತಾಗುತ್ತದೆ. ಚುನಾಯಿತ ಪ್ರತಿನಿಧಿಗಳ ಮನೆಯಲ್ಲಿ, ಮುಸಲ್ಮಾನರ ಮನೆಯಲ್ಲಿ, ಕೆಲವೆಡೆ ಬಿಬಿಎಂಪಿ ಬೂತ್ ಗಳಲ್ಲಿ ಪ್ರತ್ಯೇಕವಾಗಿ ಸಮೀಕ್ಷೆ ನಡೆಯುತ್ತಿದೆ. ಕೆಲವೆಡೆ ಶಾಸಕರ ಭಾವಚಿತ್ರಗಳನ್ನೂ ಬಿಎಲ್ಒಗಳು ತೋರಿಸಿ ಸಮೀಕ್ಷೆ ನಡೆಸುತ್ತಿದ್ದಾರೆ' ಎಂದು ದೂರಿದರು.

**ಪೆನ್‌ಡ್ರೈವ್, ದಾಖಲೆಗಳ ಸಲ್ಲಿಕೆ:**

ಅಕ್ರಮಗಳ ಕುರಿತು ಪೆನ್ ಡ್ರೈವ್ ಸೇರಿದಂತೆ ಹಲವು ದಾಖಲೆಗಳನ್ನು ಚುನಾವಣಾಧಿಕಾರಿಗೆ ನೀಡಲಾಗಿದೆ. ದೂರುಗಳ ಬಗ್ಗೆ ಕೇಂದ್ರ ಆಯೋಗದ ಗಮನ ಸೆಳೆದಿರುವುದಾಗಿಯೂ ಅವರು ತಿಳಿಸಿದ ಅವರು, ಕೇಂದ್ರ ಸರ್ಕಾರವನ್ನು ಮತ್ತು ಇತರೆ ರಾಜ್ಯಗಳ ಮೇಲೆ ಅಕ್ರಮದ ಆರೋಪ ಮಾಡುತ್ತಿರುವ ಕಾಂಗ್ರೆಸ್ ಸರ್ಕಾರವೇ ಅಕ್ರಮ ಎಸಗುತ್ತಿದೆ ಎಂದು ದೂರಿದರು.

2002ರ ಮತದಾರರ ಪಟ್ಟಿಯಲ್ಲಿರುವ ಅಪ್ಪ, ಅಮ್ಮ, ಅಜ್ಜ, ಅಜ್ಜಿ ಸಂಬಂಧಿಕರೆಂದು ಪರಿಗಣಿಸಬೇಕು ಎಂದು ನಿಯಮ ಸ್ಪಷ್ಟವಾಗಿ ಹೇಳುತ್ತದೆ. ಆದರೆ ಅದನ್ನು ಮೀರಿ ಸಂಬಂಧಿಕರ ವ್ಯಾಖ್ಯಾನ ಮಾಡಲಾಗಿದೆ. ಮುಲ್ಲಾ, ನದಾಫ್ ಎಂಬಂತೆ ಒಂದೇ ಹೆಸರಿನವರು ಹಲವರು ಇದ್ದಾಗ ಅಕ್ರಮ ಆಗದೆ ಇರುತ್ತದೆಯೇ ಎಂದು ಪ್ರಶ್ನಿಸಿದರು.

ಸಿಎಂ ಡಿ.ಕೆ.ಶಿವಕುಮಾರ್ ಅವರು ಜನರನ್ನು ಹೆದರಿಸಿ ಸಮೀಕ್ಷೆ ನಡೆಸುವ ಷಡ್ಯಂತ್ರ ನಡೆಸಿದ್ದಾರೆ. ಮತದಾರರ ಪಟ್ಟಿಯಿಂದ ಹೆಸರು ತೆಗೆಯಲ್ಪಟ್ಟವರಿಗೆ ಗ್ಯಾರಂಟಿ ಸೌಲಭ್ಯ ಕೊಡುವುದಿಲ್ಲ ಎನ್ನುವುದು ಬೆದರಿಕೆ ತಾನೆ ಎಂದು ಕೇಳಿದರು.

# ಘನತ್ಯಾಜ್ಯ ವಿಂಗಡಣೆ ಕಡ್ಡಾಯ

• ಪ್ರಜೋದಯ ವರದಿ

ಅರಕಲಗೂಡು: ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಘನತ್ಯಾಜ್ಯ ನಿರ್ವಹಣಾ ನಿಯಮಗಳು 2026 ರನ್ವಯ ಏ.1 ರಿಂದ ಅನ್ವಯವಾಗುವಂತೆ ಜಾರಿಗೊಳಿಸಲಾಗಿದ್ದು, ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಮನೆ ಮಟ್ಟದಲ್ಲಿ ಹಾಗೂ ವಾಣಿಜ್ಯ ಸಂಸ್ಥೆಗಳಲ್ಲಿ ಮೂಲದಲ್ಲಿಯೇ 4 ವಿಭಾಗಗಳಲ್ಲಿ ತ್ಯಾಜ್ಯ ವಿಂಗಡಣೆ ಮಾಡುವುದು ಕಡ್ಡಾಯವಾಗಿರುತ್ತದೆ ಎಂದು ಅರಕಲಗೂಡು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ತಿಳಿಸಿದ್ದಾರೆ.

ಸಾರ್ವಜನಿಕರು ತ್ಯಾಜ್ಯವನ್ನು ಮೂಲದಲ್ಲಿಯೇ ಹಸಿಕಸ, ಒಣಕಸ, ಸ್ಯಾನಿಟರಿ ತ್ಯಾಜ್ಯ, ವಿಶೇಷ ಕಾಳಜಿ ತ್ಯಾಜ್ಯ (ಪೈಂಟ್ ಡ್ರಮ್‌ಗಳು, ಬಣ್ಣಗಳು), ಕೀಟನಾಶಕ ಕ್ಯಾನ್ ಅಥವಾ ಬಾಟಲಿಗಳು, ಬಲ್ಬ್‌ಗಳು, ಅವಧಿ ಮೀರಿದ ಔಷಧಿಗಳು, ಬಳಕೆಯಾಗದ ಅಥವಾ ನಿರುಪಯುಕ್ತ ಸೂಜಿಗಳು, ಸಿರೆಂಜ್‌ಗಳು ಮತ್ತು ಕಲುಷಿತ ಮಾಪಕಗಳು) ಗಳನ್ನಾಗಿ ವಿಂಗಡಿಸಲು ಸೂಚಿಸಲಾಗಿದೆ, ತಪ್ಪಿದಲ್ಲಿ ಘನತ್ಯಾಜ್ಯ ನಿರ್ವಹಣಾ ನಿಯಮಗಳು 2026 ರನ್ವಯ ದಂಡ ವಿಧಿಸಲಾಗುವುದು ಹಾಗೂ ಕ್ರಮ ಜರುಗಿಸಲಾಗುವುದು.

20.000 ಚ.ಮೀ. ನಿರ್ಮಿತ ಪ್ರದೇಶ ಹೊಂದಿದ್ದಲ್ಲಿ ಅಥವಾ ಪ್ರತಿದಿನ 40.000 ಲೀಟರ್ ನೀರು ಬಳಕೆ ಮಾಡಿದ್ದಲ್ಲಿ ಅಥವಾ ಪ್ರತಿದಿನ 100 ಕೆ.ಜಿ. ತ್ಯಾಜ್ಯ ಉತ್ಪಾದನೆ ಮಾಡಿದ್ದಲ್ಲಿ, ಬೃಹತ್ ತ್ಯಾಜ್ಯ ಉತ್ಪಾದಕರೆಂದು ಗುರುತಿಸಲಾಗುತ್ತಿದೆ.

ಒಣತ್ಯಾಜ್ಯ, ಸ್ಯಾನಿಟರಿ ತ್ಯಾಜ್ಯ, ಹಾಗೂ ವಿಶೇಷ ಕಾಳಜಿ ತ್ಯಾಜ್ಯವನ್ನು ಸಂಗ್ರಹಿಸಿ ಅದನ್ನು ಪಟ್ಟಣ ಪಂಚಾಯಿತಿಗೆ ಅಥವಾ ಅದರ ಮೂಲಕ ಅಧಿಕೃತಗೊಳಿಸಲಾದ ಏಜೆನ್ಸಿಗೆ ಹಸ್ತಾಂತರಿಸಲು ಅಗತ್ಯ ವ್ಯವಸ್ಥೆಗಳನ್ನು ಮಾಡಿಕೊಳ್ಳುವುದು, ತಪ್ಪಿದಲ್ಲಿ ಘನತ್ಯಾಜ್ಯ ನಿರ್ವಹಣಾ ನಿಯಮಗಳು 2026 ರನ್ವಯ ವಿಧಿಸಲಾಗುವುದು ಹಾಗೂ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು ಎಂದು ತಿಳಿಸಿದ್ದಾರೆ.

# ಹದಗೆಟ್ಟ ಬೇಲೂರು- ಗೆಂಡೆಹಳ್ಳಿ ಮುಖ್ಯರಸ್ತೆ: ಸಂಚಾರ ದುಸ್ತರ

• ಪ್ರಜೋದಯ ವರದಿ



**ಬೇಲೂರು:** ಪಟ್ಟಣದಿಂದ ಗೆಂಡೆಹಳ್ಳಿ, ಮೂಡಿಗೆರೆ, ಮಂಗಳೂರು ಹಾಗೂ ಶೃಂಗೇರಿ ಸಂಪರ್ಕಿಸುವ ಪ್ರಮುಖ ರಾಜ್ಯ ಹೆದ್ದಾರಿ ಇಂದು ಗುಂಡಿಗಳ ರಸ್ತೆಯಾಗಿ ಮಾರ್ಪಟ್ಟಿದ್ದು, ವಾಹನ ಸವಾರರು ಹಾಗೂ ಸಾರ್ವಜನಿಕರು ಜೀವ ಭಯದಿಂದ ಸಂಚರಿಸುವಂತಾಗಿದೆ.

ಇತ್ತೀಚೆಗೆ ನಡೆಯುತ್ತಿರುವ ಬೇಲೂರು - ಚಿಕ್ಕಮಗಳೂರು ರೈಲು ಮಾರ್ಗ ಕಾಮಗಾರಿಗೆ ದಿನನಿತ್ಯ ಭಾರೀ ಪ್ರಮಾಣದಲ್ಲಿ ಓಡಾಡುತ್ತಿ ರುವ ಅತಿ ಭಾರದ ಟಿಪ್ಪರ್ ಲಾರಿ ಗಳಿಂದ ರಸ್ತೆ ಸಂಪೂರ್ಣ ಹಾಳಾಗಿ ರುವುದಾಗಿ ಸಾರ್ವಜನಿಕರು ಆರೋಪಿಸಿದ್ದಾರೆ.

ರಸ್ತೆಯ ಹಲವೆಡೆ ಆಳವಾದ ಗುಂಡಿಗಳು ನಿರ್ಮಾಣವಾಗಿದ್ದು, ಮಳೆ ಬಂದಾಗ ಅವು ನೀರಿನಿಂದ ತುಂಬಿ ಕಾಣಿಸದ ಕಾರಣ ಅಪಘಾತದ ಅಪಾಯ ಮತ್ತಷ್ಟು ಹೆಚ್ಚುತ್ತಿದೆ. ಗುಂಡಿಗಳು ಉಂಟಾದ ಸ್ಥಳಗಳಲ್ಲಿ ತಾತ್ಕಾಲಿಕ ದುರಸ್ತಿ ಕಾರ್ಯವನ್ನೂ ಕೈಗೊಳ್ಳದಿರುವುದು ಸಂಬಂಧಪಟ್ಟ ಇಲಾಖೆಗಳ ನಿರ್ಲಕ್ಷ್ಯವನ್ನು ಎತ್ತಿ ತೋರಿಸುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಇದರ ಜೊತೆಗೆ ಜಲ್ ಜೀವನ್ ಮಿಷನ್ ಯೋಜನೆಯಡಿ ಕುಡಿಯುವ ನೀರಿನ ಪೈಪ್ ಅಳವಡಿಕೆಗಾಗಿ ರಸ್ತೆ ಅಗೆದು, ಬಳಿಕ ಸಮರ್ಪಕವಾಗಿ ಮರುಸ್ಥಾಪನೆ ಮಾಡದೇ ಬಿಟ್ಟಿರುವುದರಿಂದ ಸಮಸ್ಯೆ ಮತ್ತಷ್ಟು ಗಂಭೀರವಾಗಿದೆ. ರಸ್ತೆ ಸಂಪೂರ್ಣ ಉಬ್ಬು-ತಗ್ಗುಗಳಿಂದ ಕೂಡಿದ್ದು, ದ್ವಿಚಕ್ರ ವಾಹನ ಸವಾರರು ಹೆಚ್ಚು ಸಂಕಷ್ಟ ಅನುಭವಿಸುವಂತಾಗಿದೆ. ಈ ಮಾರ್ಗದಲ್ಲಿ ಪ್ರತಿದಿನ ಸಾವಿರಾರು ವಾಹನಗಳು, ಶಾಲಾ-ಕಾಲೇಜು ವಿದ್ಯಾರ್ಥಿಗಳು, ಸಾರ್ವಜನಿಕ ಸಾರಿಗೆ ಬಸ್‌ಗಳು ಹಾಗೂ ಪ್ರವಾಸಿಗರು ಸಂಚರಿಸುತ್ತಾರೆ. ವಿಶ್ವವಿಖ್ಯಾತ ಬೇಲೂರು ದೇವಾಲಯಕ್ಕೆ ತೆರಳುವ ಪ್ರವಾಸಿಗರೂ ಇದೇ ರಸ್ತೆಯನ್ನು ಬಳಸುವುದರಿಂದ ಜಿಲ್ಲೆಯ ಪ್ರತಿಷ್ಠೆಗೆ ಧಕ್ಕೆಯಾಗುತ್ತಿದೆ ಎಂದು ಸ್ಥಳೀಯರು ಅಭಿಪ್ರಾಯಪಟ್ಟಿದ್ದಾರೆ.

ಇಷ್ಟೆಲ್ಲ ಸಮಸ್ಯೆಗಳಿದ್ದರೂ ಸಂಬಂಧಪಟ್ಟ ಇಲಾಖೆ, ಗುತ್ತಿಗೆದಾರರು ಹಾಗೂ ಅಧಿಕಾರಿಗಳು ಮೌನ ವಹಿಸಿರುವುದು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿದೆ. ರಸ್ತೆ ಸಂಪೂರ್ಣ ಹಾಳಾಗುವ ಮುನ್ನವೇ ತಕ್ಷಣ ಗುಂಡಿಗಳನ್ನು ಮುಚ್ಚಿ, ಹಾನಿಗೊಳಗಾದ ರಸ್ತೆಯನ್ನು ವೈಜ್ಞಾನಿಕವಾಗಿ ದುರಸ್ತಿಪಡಿಸಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

ಈ ರಸ್ತೆಯಲ್ಲಿ ಸಂಚರಿಸುವ ಬೈಕ್ ಹಾಗೂ ಕಾರು ಚಾಲಕರು ಅತ್ಯಂತ ಎಚ್ಚರಿಕೆಯಿಂದ ವಾಹನ ಚಲಾಯಿಸುವುದು ಅನಿವಾರ್ಯ. ಮಳೆಗಾಲದಲ್ಲಿ ಗುಂಡಿಗಳು ಸ್ಪಷ್ಟವಾಗಿ ಕಾಣಿಸದ ಕಾರಣ ಅಪಘಾತ ಸಂಭವಿಸುವ ಸಾಧ್ಯತೆ ಹೆಚ್ಚಿದ್ದು, ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡುವಂತೆ ಸಾರ್ವಜನಿಕರು ಮನವಿ ಮಾಡಿದ್ದಾರೆ.



**ಹಾಸನ:** ಡಾ.ಬಾಬು ಜಗಜೀವನ್ ರಾಮ್ ಅವರ 40ನೇ ಪುಣ್ಯಸ್ಮರಣೆ ಅಂಗವಾಗಿ ಸೋಮವಾರ ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ನಮನ ಸಲ್ಲಿಸಲಾಯಿತು. ಎಡಿಸಿ ಕೃಷ್ಣಮೂರ್ತಿ, ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಚಂದ್ರಶೇಖರ್, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ದೂದ್ ಪೀರ್ ಹಾಗೂ ಮತ್ತಿತರರು ಭಾಗವಹಿಸಿದ್ದರು.



ಹಾರನಹಳ್ಳಿ ಸಮೀಪದ ಎರೆಹಳ್ಳಿ ಗ್ರಾಮದ ಸರ್ಕಾರಿ ತಾಲ್ಲೂಕು ಶಿಕ್ಷಣ ಸುಧಾರಣಾ ಸಮಿತಿ ಸದಸ್ಯರಾದ ವೈ.ಕೆ.ದೇವರಾಜು ಅವರು ಶಾಲೆಗೆ ಭೇಟಿ ನೀಡಿ ಶಾಲೆಯ ಸೌಲಭ್ಯಗಳ ಬಗ್ಗೆ ವಿದ್ಯಾರ್ಥಿಗಳ ಜೊತೆ ಚರ್ಚಿಸಿದರು. ಈ ಸಂದರ್ಭದಲ್ಲಿ ಅಲ್ಲಿಯ ಶಿಕ್ಷಕರು ಶಾಲೆಯನ್ನು ತುಂಬಾ ಅಚ್ಚುಕಟ್ಟಾಗಿ ಬಳಕೆ ಮಾಡಿಕೊಂಡಿರುತ್ತಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

# ಕಲಾವಿದರ ಹಕ್ಕುಗಳಿಗಾಗಿ ಸಂಘಟನೆ ಮುಖ್ಯ

## ಅರ್ಹ ಫಲಾನುಭವಿಗಳಿಗೆ ತಲುಪದ ಸರ್ಕಾರಿ ಯೋಜನೆಗಳು: ಸಬ್ಬನಹಳ್ಳಿ ರಾಜು

• ಪ್ರಜೋದಯ ವರದಿ



**ಹಾಸನ:** ಬೀದಿ ನಾಟಕ ಕಲಾವಿದರ ಹಕ್ಕು ಹಾಗೂ ಸರ್ಕಾರದಿಂದ ದೊರಕುವ ಸೌಲಭ್ಯಗಳನ್ನು ಪಡೆಯಲು ಒಗ್ಗಟ್ಟು, ಹಾಗೂ ಸಂಘಟನೆ ಬಹಳ ಮುಖ್ಯ ಎಂದು ಬೀದಿ ನಾಟಕ ಕಲಾತಂಡಗಳ ಒಕ್ಕೂಟದ ರಾಜ್ಯಾಧ್ಯಕ್ಷ ಸಬ್ಬನಹಳ್ಳಿ ರಾಜು ತಿಳಿಸಿದರು.

ಕರ್ನಾಟಕ ರಾಜ್ಯ ಬೀದಿನಾಟಕ ಕಲಾ ತಂಡಗಳ ಒಕ್ಕೂಟ ಹಾಗೂ ಹಾಸನ ಜಿಲ್ಲಾ ಘಟಕ ಇವರ ವತಿಯಿಂದ ನಗರದ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಸೋಮವಾರ ನಡೆದ ಮೈಸೂರು ವಿಭಾಗ ಮಟ್ಟದ ಸಭೆ ಉದ್ದೇಶಿಸಿ ಅವರು ಮಾತನಾಡಿದರು.

ಇತ್ತೀಚೆಗೆ ಸರ್ಕಾರ ಬೀದಿ ನಾಟಕ ಕಲಾವಿದರಿಗೆ ಹಲವು ಕಾರ್ಯಕ್ರಮಗಳನ್ನು ಜಾರಿಗೆ ತಂದಿದೆ. ಆದರೆ ಅವು ಅರ್ಹ ಫಲಾನುಭವಿಗಳಿಗೆ ಸಮರ್ಪಕವಾಗಿ ತಲುಪುತ್ತಿಲ್ಲ, ನಮ್ಮ ಹಕ್ಕುಗಳನ್ನು ಪಡೆಯಲು ನಮ್ಮಲ್ಲಿ ಒಗ್ಗಟ್ಟು ಬಹಳ ಮುಖ್ಯ ನಿಟ್ಟಿನಲ್ಲಿ ರಾಜ್ಯಾದ್ಯಂತ ಕಲಾವಿದರನ್ನು ಒಗ್ಗೂಡಿಸಿ ಈ ಬಗ್ಗೆ ಅರಿವು ಮೂಡಿಸುವ ಕೆಲಸ ಮಾಡಲಾಗುತ್ತಿದೆ ಇದಕ್ಕೆ ಎಲ್ಲಾ ಕಲಾವಿದರು ಕೈ ಜೋಡಿಸಬೇಕು ಎಂದು ಅವರು ಕರೆ ನೀಡಿದರು.

ಕಲಾವಿದರ ಗೌರವಧನ ಹೆಚ್ಚಳ ಹಾಗೂ ಆರೋಗ್ಯ ನಿಧಿ ಒದಗಿಸುವ ಪ್ರಸ್ತಾವನೆ ಸಲ್ಲಿಸುವ ಸಲುವಾಗಿ ಸಭೆಯಲ್ಲಿ ಚರ್ಚೆ ನಡೆದಿದೆ, ಜೊತೆಗೆ ಸರ್ಕಾರದಿಂದ ಹೆಚ್ಚು ಹೆಚ್ಚು ಕಾರ್ಯಕ್ರಮಗಳನ್ನು ನೀಡಬೇಕು ಎಂಬ ಹಲವು ವಿಚಾರಗಳ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿದೆ ಜೊತೆಗೆ ಸರ್ಕಾರ ಹಾಗೂ ಇಲಾಖೆಗಳ ನಡುವೆ ಸಂಪರ್ಕ ಸೇತುವೆಯಾಗಿ ನಮ್ಮ ಸಂಘಟನೆ ಕೆಲಸ ಮಾಡಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ವಿವಿಧ ಇಲಾಖೆಗಳಿಂದ ನಡೆಯುವ ಕಾರ್ಯಕ್ರಮಗಳ ಬೀದಿ ನಾಟಕಗಳ ಮೂಲಕ ಅರಿವು ಮೂಡಿಸುವ ಕಲಾವಿದರಿಗೆ ಇಲಾಖೆಯಿಂದ ಬರುವ ಅನುದಾನ ವಿಳಂಬ ಹಾಗೂ ಮಧ್ಯವರ್ತಿಗಳ ಮತ್ತು ನಕಲಿ ಕಲಾವಿದರ ಹಾವಳಿ ಇನ್ನಿತರ ಸಮಸ್ಯೆಗಳನ್ನು ತಡೆಗಟ್ಟಿ ನಿಜವಾದ ಕಲಾವಿದರಿಗೆ ನ್ಯಾಯ ಒದಗಿಸುವ ಸಲುವಾಗಿ ಸಂಘಟನೆ ಗಟ್ಟಿಗೊಳಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಪ್ರಧಾನ ಕಾರ್ಯದರ್ಶಿ ಮಂಡ್ಯ ಬಸವರಾಜು, ರಾಜ್ಯ ಉಪಾಧ್ಯಕ್ಷ ಕುಮಾರ್ ಕಟ್ಟೆ ಬೆಳಗುಲಿ, ರಾಜ್ಯ ಸಲಹಾ ಸಮಿತಿ ಸದಸ್ಯರಾದ ಕಾರವಾರದ ಪುರುಷೋತ್ತಮಗೌಡ, ಚಾಮರಾಜನಗರದ ಶಾಂತರಾಜು, ರಾಜ್ಯ ಸಂಚಾಲಕರಾದ ಲೋಕೇಶ್ ಭಕ್ತನಕಟ್ಟೆ, ನೀಲಮ್ಮ ಇನ್ನಿತರರು ಭಾಗವಹಿಸಿದ್ದರು.

ಮತ್ತು ಮೈಸೂರು ವಿಭಾಗ ಮಟ್ಟದ 8 ಜಿಲ್ಲೆಯ ಕಲಾವಿದರು ಸೇರಿದ್ದರು

# ಪೋಷಕತ್ವ ಯೋಜನೆಗೆ ಅರ್ಜಿ ಆಹ್ವಾನ

• ಪ್ರಜೋದಯ ವರದಿ



**ಹಾಸನ:** ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ ನಾನಾ ರೀತಿಯ ಸಂಕಷ್ಟಕ್ಕೆ ಒಳಗಾಗಿ ದಾಖಲಾಗಿರುವ 6 ರಿಂದ 18 ವರ್ಷದೊಳಗಿನ ಮಕ್ಕಳನ್ನು ಪೋಷಕತ್ವ ಯೋಜನೆಯಡಿ ಪಾಲನೆ ಹಾಗೂ ಪೋಷಣೆಗಾಗಿ ಆಸಕ್ತಿಯಿರುವ ಪೋಷಕರಿಂದ ಅರ್ಜಿ ಆಹ್ವಾನಿಸಲಾಗಿದೆ.

ಮಕ್ಕಳ ಕಲ್ಯಾಣ ಸಮಿತಿಯ ಆದೇಶದ ಮೇರೆಗೆ ಮಗುವಿಗೆ ಕುಟುಂಬದ ವಾತಾವರಣವನ್ನು ತಾತ್ಕಾಲಿಕವಾಗಿ ಅಥವಾ ವಿಸ್ತರಿಸಲ್ಪಟ್ಟ ಒಂದು ವರ್ಷದ ಅವಧಿಗೆ ಮೀರದಂತೆ ಮಗುವನ್ನು ಪೋಷಕತ್ವ ಯೋಜನೆಯಡಿ ನಿಯೋಜನೆ ಮಾಡಬಹುದಾಗಿದೆ, ಮಗು ಹಾಗೂ ಕುಟುಂಬದ ಹೊಂದಾಣಿಕೆಯ ಆಧಾರದ ಮೇರೆಗೆ ಮಕ್ಕಳ ಕಲ್ಯಾಣ ಸಮಿತಿಯು ಮಗುವನ್ನು 18 ವರ್ಷದವರೆಗೂ ಪೋಷಕತ್ವವನ್ನು ಮುಂದುವರಿಸಲು ಅವಕಾಶ ಕಲ್ಪಿಸುತ್ತದೆ.

ಆಸಕ್ತ ಪೋಷಕರು ಜಿಲ್ಲೆಯ ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಸಂಪಿಗೆ ರಸ್ತೆ, ಮಸೀದಿ ಹತ್ತಿರ, ಕೆ.ಆರ್ ಪುರಂ ಅಥವಾ ದೂರವಾಣಿ ಸಂಖ್ಯೆ:08172-231360 ಗೆ ಸಂಪರ್ಕಿಸಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ತಿಳಿಸಿದ್ದಾರೆ.

# ಕುಟುಂಬ ನಿರ್ವಹಣೆಗೆ 'ಜ್ಞಾನವಿಕಾಸ' ಸಹಕಾರಿ

## ತಿಪ್ಪನಹಳ್ಳಿಯಲ್ಲಿ ದೇವಿಶ್ರೀ ನೂತನ ಜ್ಞಾನವಿಕಾಸ ಕೇಂದ್ರ ಉದ್ಘಾಟನೆ

• ಪ್ರಜೋದಯ ವರದಿ



**ಆಲೂರು:** ದುರ್ಬಲ ವರ್ಗದ ಮಹಿಳೆಯರಲ್ಲಿ ಕುಟುಂಬ ನಿರ್ವಹಣಾ ಜಾಣ್ಮೆಗೆ ಜ್ಞಾನವಿಕಾಸ ಕಾರ್ಯಕ್ರಮ ಸಹಕಾರಿಯಾಗಿದೆ ಎಂದು ಶ್ರೀ ಧರ್ಮಸ್ಥಳ ಗ್ರಾಮಾಭಿವೃದ್ಧಿ ತಾಲ್ಲೂಕು ಯೋಜನಾಧಿಕಾರಿ ರತ್ನಾಕರ ಕೊಟ್ಟಾರಿ ಅವರು ಹೇಳಿದರು.

ಮಗ್ಗೆ ವಲಯದ ತಿಪ್ಪನಹಳ್ಳಿ ಕಾರ್ಯಕ್ಷೇತ್ರದಲ್ಲಿ ದೇವಿಶ್ರೀ ನೂತನ ಜ್ಞಾನವಿಕಾಸ ಕೇಂದ್ರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಹಿಳೆಯರಿಗೆ ಹಣಕಾಸು ವ್ಯವಹಾರ ಜ್ಞಾನ, ಮಕ್ಕಳ ಶಿಕ್ಷಣ, ಪೌಷ್ಟಿಕ ಆಹಾರ ಸೇವನೆ, ವೈಯಕ್ತಿಕ ಶುಚಿತ್ವ, ಪರಿಸರ ಪ್ರಜ್ಞೆ, ಸ್ವ-ಉದ್ಯೋಗ, ನಾಗರೀಕ ಸೌಲಭ್ಯ ಬಳಕೆ ಮುಂತಾದ ಗುರಿಗಳನ್ನಿರಿಸಿಕೊಂಡು ಯೋಜನೆಯನ್ನು ಪ್ರಾರಂಭಿಸಲಾಗಿದೆ ಎಂದರು.

ಮಹಿಳಾ ಜ್ಞಾನವಿಕಾಸ ಕಾರ್ಯಕ್ರಮವು ಶ್ರೀ ಕ್ಷೇತ್ರ ಧರ್ಮಸ್ಥಳದ ಹೇಮಾವತಿ ವಿ.ಹೆಗ್ಗಡೆಯವರ ಅಧ್ಯಕ್ಷತೆಯಲ್ಲಿ ಇಂದು ಜನಪ್ರಿಯ ಕಾರ್ಯಕ್ರಮವಾಗಿ ದೊಡ್ಡದಾಗಿ ಬೆಳೆದು ಬಂದಿದೆ. ವಾತ್ಸಲ್ಯ ಕಾರ್ಯಕ್ರಮ, ವಾತ್ಸಲ್ಯ ಕಿಟ್, ಜ್ಞಾನವಿಕಾಸ ಯೂ ಟ್ಯೂಬ್ ಚಾನೆಲ್, ಕೌಟುಂಬಿಕ ಸಾಮರಸ್ಯ ಮತ್ತು ಸಾಮಾಜಿಕ ಸಮಸ್ಯೆಗೊಳಗಾದ ಮಹಿಳೆಯರಿಗೆ ಮತ್ತು ಅವರ ಕುಟುಂಬ ವರ್ಗದವರಿಗೆ ಆಪ್ತ ಸಮಾಲೋಚನೆ ಮಾಡಿ ಅವರ ಬದುಕನ್ನು ಸರಿಪಡಿಸುವ ಗೆಳತಿ ಕಾರ್ಯಕ್ರಮವಾಗಿದೆ, ದುಡಿಯಲು ಶಕ್ತಿ ಇಲ್ಲದೆ ಅತ್ಯಂತ ಅಸಹಾಯಕ ಸ್ಥಿತಿಯಲ್ಲಿರುವ ಅಶಕ್ತರಿಗೆ ಜೀವನ ನಿರ್ವಹಣೆಗಾಗಿ ಮಾಶಾಸನ ಕಾರ್ಯಕ್ರಮವನ್ನು ನಡೆಸಲಾಗುತ್ತದೆ ಎಂದು ತಿಳಿಸಿದರು.

ಸಮಾರಂಭದಲ್ಲಿ ಒಕ್ಕೂಟ ಅಧ್ಯಕ್ಷೆ ಶ್ರುತಿ, ಗ್ರಾಮ ಪಂಚಾಯಿತಿ ಸದಸ್ಯ ಮೂರ್ತಿ, ಮುಖಂಡರಾದ ಮಂಜುನಾಥ್, ಹಾಲಿನ ಡೈರಿ ಅಧ್ಯಕ್ಷೆ ಶೋಭಾ, ಕೇಂದ್ರ ಸಂಯೋಜಕಿ ರಾಧ, ವಲಯ ಮೇಲ್ವಿಚಾರಕರಾದ ಗೋವಿಂದಪ್ಪ, ಜ್ಞಾನವಿಕಾಸ ಸಮನ್ವಯಧಿಕಾರಿ ಸರಸ್ವತಿ, ಸೇವಾ ಪ್ರತಿನಿಧಿ ಚಂದನ, ಕೇಂದ್ರದ ಸದಸ್ಯರು ಉಪಸ್ಥಿತರಿದ್ದರು.

# ಕೆ.ಇ.ಆರ್.ಸಿ ನಾಮ ನಿರ್ದೇಶಿತ ಸದಸ್ಯರ ನೇಮಕಾತಿಗೆ ಅರ್ಜಿ

• ಪ್ರಜೋದಯ ವರದಿ

**ಹಾಸನ:** ಚಾಮುಂಡೇಶ್ವರಿ ವಿದ್ಯುಚ್ಛಕ್ತಿ ಸರಬರಾಜು ನಿಗಮ ನಿಯಮಿತ ಹಾಸನ ಜಿಲ್ಲಾ ಗ್ರಾಹಕರ ಕುಂದುಕೊರತೆ ನಿವಾರಣಾ ವೇದಿಕೆಗೆ ಕೆ.ಇ.ಆರ್.ಸಿ. ನಾಮ ನಿರ್ದೇಶಿತ ಸದಸ್ಯರ ನೇಮಕಾತಿಗಾಗಿ ಆಸ್ತಕ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ವಿದ್ಯುತ್ ಕ್ಷೇತ್ರ/ಗ್ರಾಹಕರ ಹಾಗೂ ಕಾನೂನು ವಿಷಯಗಳಲ್ಲಿ ಸೂಕ್ತ ಅನುಭವ ಅಥವಾ ಜ್ಞಾನವುಳ್ಳ ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿರುವ ಆಸಕ್ತ ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಬಹುದಾಗಿದೆ ಜು.13 ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಅಧೀಕ್ಷಕ ಇಂಜಿನಿಯರ್ (ವಿ) ರವರ ಕಚೇರಿ, ಕಾರ್ಯ ಮತ್ತು ಪಾಲನಾ ವೃತ್ತ, ಚಾಮುಂಡೇಶ್ವರಿ ವಿದ್ಯುಚ್ಛಕ್ತಿ ಸರಬರಾಜು ನಿಗಮ ನಿಯಮಿತ, ಬಿ.ಎಂ. ರಸ್ತೆ, ಸಂತೇಪೇಟೆ, ಹಾಸನ ಕಚೇರಿಗೆ ಸಂಪರ್ಕಿಸಬಹುದಾಗಿದೆ ಎಂದು ಚಾಮುಂಡೇಶ್ವರಿ ವಿದ್ಯುಚ್ಛಕ್ತಿ ಸರಬರಾಜು ನಿಗಮ ನಿಯಮಿತ ಅಧೀಕ್ಷಕ ಇಂಜಿನಿಯರ್ ಹಾಗೂ ಗ್ರಾಹಕರ ಕುಂದು ಕೊರತೆ ನಿವಾರಣಾ ವೇದಿಕೆ ಅಧ್ಯಕ್ಷರು ತಿಳಿಸಿದ್ದಾರೆ.

## ವಿಸ್ಮಯ ಕೀಟಗಳ ಪ್ರದರ್ಶನ, ಕೀಟ-ಪಕ್ಷಿಗಳ ಛಾಯಾಚಿತ್ರ ಪ್ರದರ್ಶನದಲ್ಲಿ ಹೆಮ್ಮಿಗೆ ಮೋಹನ್

# ಪರಿಸರ ಸಮತೋಲನಕ್ಕೆ ಜೀವ ವೈವಿಧ್ಯತೆ ಸಂರಕ್ಷಣೆ ಅಗತ್ಯ

• ಪ್ರಜೋದಯ ವರದಿ



**ಹಾಸನ:** ಪರಿಸರ ಸಮತೋಲನ ಕಾಪಾಡಲು ಹಾಗೂ ಜೀವ ವೈವಿಧ್ಯತೆಯನ್ನು ಉಳಿಸಲು ಕೀಟಗಳ ಸಂರಕ್ಷಣೆ ಅತ್ಯಗತ್ಯ ಎಂದು ಭಾರತೀಯ ರೆಡ್‌ಕ್ರಾಸ್ ಸಂಸ್ಥೆ ಜಿಲ್ಲಾ ಶಾಖೆ ಸಭಾಪತಿ ಹೆಮ್ಮಿಗೆ ಮೋಹನ್ ಹೇಳಿದರು.

ಕೃಷಿ ವಿಶ್ವವಿದ್ಯಾಲಯ, ಮಂಡ್ಯ, ಕೃಷಿ ಮಹಾವಿದ್ಯಾಲಯ, ಕಾರೆಕೆರೆ ಹಾಗೂ ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಜಿಲ್ಲಾ ಶಾಖೆ ಹಾಸನ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ವಿಸ್ಮಯ ಕೀಟಗಳ ಪ್ರದರ್ಶನ, ಕೀಟ ಮತ್ತು ಪಕ್ಷಿಗಳ ಛಾಯಾಚಿತ್ರ ಪ್ರದರ್ಶನ ಹಾಗೂ ಬೇಕರಿ ಮತ್ತು ಜೈವಿಕ ಉತ್ಪನ್ನಗಳ ಮಾರಾಟ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿ, ಇತ್ತೀಚಿನ ದಿನಗಳಲ್ಲಿ ವಿವಿಧ ಕೀಟಗಳ ಹಾಗೂ ಕೆಲವು ಪಕ್ಷಿಗಳ ಸಂಖ್ಯೆ ಆತಂಕಕಾರಿ ರೀತಿಯಲ್ಲಿ ಕಡಿಮೆಯಾಗುತ್ತಿದೆ ಎಂದು ವಿಷಾದಿಸಿದರು.

ಪರಿಸರವನ್ನು ಸ್ವಚ್ಛವಾಗಿಡುವುದು, ಪರಿಸರ ಸಮತೋಲನ ಕಾಪಾಡುವುದು ಹಾಗೂ ಸಸ್ಯಗಳ ಪರಾಗಸ್ಪರ್ಶ ಮತ್ತು ಸಂತಾನೋತ್ಪತ್ತಿಗೆ ಕೀಟಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ರಾಸಾಯನಿಕ ಗೊಬ್ಬರ ಮತ್ತು ಕೀಟನಾಶಕಗಳ ಅತಿಯಾದ ಬಳಕೆಯಿಂದ ಉಪಯುಕ್ತ ಕೀಟಗಳಿಗೂ ಹಾನಿಯಾಗುತ್ತಿದ್ದು, ರೈತರು ಹಾಗೂ ಸರ್ವಜನಿಕರು ಪರಿಸರ ಸಂರಕ್ಷಣೆಯ ಜವಾಬ್ದಾರಿಯನ್ನು ಅರಿತು ಕಾರ್ಯ ನಿರ್ವಹಿಸಬೇಕು ಎಂದರಲ್ಲದೆ, ಬೆಂಗಳೂರಿನ ಜಿಕೆವಿಕೆ ಕೃಷಿ ಕಾಲೇಜಿನ ತಮ್ಮ ವಿದ್ಯಾರ್ಥಿ ಜೀವನದ ಅನುಭವಗಳು ಹಾಗೂ ಕೀಟ ಸಂಗ್ರಹ ಮತ್ತು ಅಧ್ಯಯನದ ಕುರಿತ ಮಾಹಿತಿ ಹಂಚಿಕೊಂಡರು.

ಹಾಸನ ಜಿಲ್ಲಾ ಪಕ್ಷಿ ವೀಕ್ಷಕರ ಸಂಘದ ಅಧ್ಯಕ್ಷ ಬಿ.ಎಸ್.ದೇಸಾಯಿ ಅವರು ಮಾತನಾಡಿ, ವಿದ್ಯಾರ್ಥಿಗಳು ಪ್ರಕೃತಿಯೊಂದಿಗೆ ನಿಕಟ ಸಂಪರ್ಕ ಬೆಳೆಸಿಕೊಂಡು ಪಕ್ಷಿಗಳು ಹಾಗೂ ಕೀಟಗಳ ಪರಿಸರದಲ್ಲಿನ ಮಹತ್ವವನ್ನು ಅರಿತು ರೈತರಿಗೆ ಜಾಗೃತಿ ಮೂಡಿಸಬೇಕು ಎಂದು ಹೇಳಿದರು.

ಕೊನೆಹಳ್ಳಿ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾ. ಎಂ.ಹೆಚ್. ಶಂಕರ್ ಅವರು ಪರಿಸರ ಸಂರಕ್ಷಣೆಯಲ್ಲಿ ಕೀಟಗಳ ಪಾತ್ರ, ರೈತರಿಗೆ ಉಪಯುಕ್ತ ಕೀಟಗಳು ಹಾಗೂ ಅವುಗಳ ಮಹತ್ವದ ಕುರಿತು ಮಾಹಿತಿ ನೀಡಿದರು.

ಕಾಲೇಜಿನ ಡೀನ್ ಡಾ.ಕೆ.ಎನ್. ಮುನಿಸ್ವಾಮಿಗೌಡ ಅವರು ಮಾತನಾಡಿ, ಇಂತಹ ಜ್ಞಾನ ನೀಡುವ ಕಾರ್ಯಕ್ರಮಗಳು ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವ ಬೆಳೆಸಲು ಸಹಕಾರಿಯಾಗುತ್ತವೆ. ವಿದ್ಯಾರ್ಥಿಗಳು ಕೀಟಗಳ ಮಹತ್ವವನ್ನು ಅರಿತು ರೈತರು ಹಾಗೂ ಕೃಷಿಕರಿಗೆ ಅದರ ಬಗ್ಗೆ ಅರಿವು ಮೂಡಿಸಬೇಕು. ತಮ್ಮ ಅಧಿಕಾರದ ಅವಧಿಯಲ್ಲಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಸಹಕಾರ ದೊಂದಿಗೆ ರೈತರು ಹಾಗೂ ವಿದ್ಯಾರ್ಥಿ ಗಳಿಗೆ ಉಪಯುಕ್ತವಾಗುವ ಹಲವು ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಆಯೋಜಿಸಿರುವುದನ್ನು ಅವರು ಶ್ಲಾಘಿಸಿದರು.

ಇದೇ ಸಂದರ್ಭದಲ್ಲಿ ಜುಲೈ ತಿಂಗಳಲ್ಲಿ ನಿವೃತ್ತಿಯಾಗಲಿರುವ ಡಾ. ಕೆ.ಎನ್.ಮುನಿಸ್ವಾಮಿಗೌಡ ಅವರನ್ನು ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಜಿಲ್ಲಾ ಶಾಖೆ ಹಾಸನದ ವತಿಯಿಂದ ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಲಾಯಿತು.

ಪರಿಸರವಾದಿಗಳಾದ ಹೆಮ್ಮಿಗೆ ಮೋಹನ್, ಬಿ.ಎಸ್.ದೇಸಾಯಿ ಹಾಗೂ ಎಚ್.ಆರ್.ನವೀನ್ ಕುಮಾರ್ ಅವರು ಸೆರೆಹಿಡಿದ ಪಕ್ಷಿ ಮತ್ತು ಕೀಟಗಳ ಅಪರೂಪದ ಛಾಯಾಚಿತ್ರಗಳು, ಕೃಷಿ ಕಾಲೇಜಿನ ಕೀಟಶಾಸ್ತ್ರ ವಿಭಾಗದ ವಿವಿಧ ಕೀಟಗಳ ಸಂಗ್ರಹ ಪ್ರದರ್ಶನ, ಬೇಕರಿ ಹಾಗೂ ಜೈವಿಕ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟ, ಶಿರಸಿ ತಾಲ್ಲೂಕಿನ ಮಧುಕೇಶ್ವರ ಹೆಗಡೆ ಅವರ ಜೇನು ಕೃಷಿ ಮತ್ತು ಜೇನು ಉದ್ಯಮದ ಉಪ ಉತ್ಪನ್ನಗಳ ಪ್ರದರ್ಶನ ಹಾಗೂ ಮಾರಾಟವು ಸಾರ್ವಜನಿಕರು, ರೈತರು ಮತ್ತು ವಿದ್ಯಾರ್ಥಿಗಳ ವಿಶೇಷ ಗಮನ ಸೆಳೆಯಿತು.

ಕಾರ್ಯಕ್ರಮದಲ್ಲಿ ಭಾರತೀಯ ರೆಡ್‌ಕ್ರಾಸ್ ಸಂಸ್ಥೆಯ ನಿರ್ದೇಶಕರಾದ ಶಬ್ಬೀರ್ ಅಹ್ಮದ್, ಅಮ್ಜಾದ್‌ಖಾನ್, ಬಿ.ಆರ್.ಉದಯಕುಮಾರ್, ಡಾ. ರಂಗಲಕ್ಷ್ಮಿ, ಹೆಚ್.ಡಿ.ಕುಮಾರ್, ಕೆ.ಟಿ.ಜಯಶ್ರೀ, ಭೀಮ್‌ರಾಜ್, ಜೇನು ಕೃಷಿ ಉದ್ಯಮದ ಮಧುಕೇಶ್ವರ ಹೆಗಡೆ, ಕೀಟಶಾಸ್ತ್ರಜ್ಞ ಮೊಸಳೆ ಮಂಜುನಾಥ್, ಡಾ.ಆರ್. ಮಂಜುನಾಥ್, ಕಾಲೇಜಿನ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.

# ಜಿಂಬಾಬ್ವೆ ಟಿ-20 ಸರಣಿಗೆ ಸಂಜು ಸ್ಯಾಮ್ಸನ್ ಔಟ್

ಮಹತ್ವದ ಬೆಳವಣಿಗೆಯೊಂದರಲ್ಲಿ ಜುಲೈ 23ರಿಂದ ಆರಂಭವಾಗಲಿರುವ ಜಿಂಬಾಬ್ವೆ ವಿರುದ್ಧದ ಮೂರು ಪಂದ್ಯಗಳ ಟಿ-20 ಸರಣಿಗೆ, ಬಿಸಿಸಿಐ 15 ಆಟಗಾರರ ಭಾರತ ತಂಡ ಪ್ರಕಟಿಸಿದೆ. ಬಿಸಿಸಿಸೈ ಪ್ರಕಟಿಸಿರುವ ತಂಡದಲ್ಲಿ ವೈಭವ್ ಸೂರ್ಯವಂಶಿ ಸ್ಥಾನ ಪಡೆದುಕೊಂಡಿದ್ದರೆ, ಅನುಭವಿ ಆಟಗಾರ ಸಂಜು ಸ್ಯಾಮ್ಸನ್ ಅವರನ್ನು ತಂಡದಿಂದ ಕೈಬಿಡಲಾಗಿದೆ.

ಈಗಾಗಲೇ ವೈಭವ್ ಸೂರ್ಯವಂಶಿ ಇಂಗ್ಲೆಂಡ್ ವಿರುದ್ಧದ ಎರಡನೇ ಟಿ-20 ಪಂದ್ಯದಲ್ಲಿ ಪಾದಾರ್ಪಣೆ ಮಾಡಿದ್ದಾರೆ. ಆದರೆ ತಮ್ಮ ಮೊದಲ ಅಂತಾರಾಷ್ಟ್ರೀಯ ಪಂದ್ಯದಲ್ಲಿ ಮಿಂಚುವಲ್ಲಿ ಅವರು ವಿಫಲರಾಗಿದ್ದಾರೆ. ಆದರೆ, ಕೇವಲ 15 ವರ್ಷದ ಬಾಲಕ ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಭಾರತ ತಂಡವನ್ನು ಪ್ರತಿನಿಧಿಸಿ ಇತಿಹಾಸ ಬರೆದಿರುವುದು, ಇಡೀ ಕ್ರಿಕೆಟ್ ಜಗತ್ತನ್ನು ಅಚ್ಚರಿಗೊಳಿಸಿದೆ.

(ಕರ್ನಾಟಕ ಸರ್ಕಾರ) ಮೀನುಗಾರಿಕೆ ಇಲಾಖೆ
ಮೀನುಗಾರಿಕೆ ಸಹಾಯಕ ನಿರ್ದೇಶಕರು
ಸಕಲೇಶಪುರ ತಾಲೂಕು, ಹಾಸನ ಜಿಲ್ಲೆ

ಟೆಂಡರ್ ಪ್ರಕಟಣೆ

ಮೀನುಗಾರಿಕೆ ಸಹಾಯಕ ನಿರ್ದೇಶಕರು ಸಕಲೇಶಪುರ ಇವರ ಕಛೇರಿಗೆ ಖಾಸಗಿ ವಾಹನ ಮಾಲೀಕರಿಂದ ಬಾಡಿಗೆ ಆಧಾರದ ಮೇಲೆ ದಿನಾಂಕ:01-08-2026 ರಿಂದ 31.03.2027 ರವರೆಗೆ ಹವಾ ನಿಯಂತ್ರಿತವಲ್ಲದ (ಸ್ವಿಫ್ಟ್ ಡಿಸಾಯರ್/ಟಾಟಾ ಇಂಡಿಕಾ/ಟೊಯೊಟಾ ಇಟಿಯೋಸ್/ತತ್ಸಮಾನ ವಾಹನಗಳು)ವಾಹನ ಪಡೆಯುವ ಸಂಬಂಧ ಅರ್ಹ ಟೆಂಡರ್‌ದಾರರಿಂದ ಟೆಂಡರ್ ಆಹ್ವಾನಿಸಲಾಗಿದೆ. ಟೆಂಡರ್‌ನಲ್ಲಿ ಭಾಗವಹಿಸಲಿಚ್ಛಿಸುವವರು ರೂ.250.00 ಗಳ ಡಿ.ಡಿ/ನಗದನ್ನು ಮೀನುಗಾರಿಕೆ ಸಹಾಯಕ ನಿರ್ದೇಶಕರು, ಸಕಲೇಶಪುರರವರಿಗೆ ಸಲ್ಲಿಸಿ, ನಿಗದಿತ ಅರ್ಜಿಯನ್ನು ಕಛೇರಿ ವೇಳೆಯಲ್ಲಿ ಪಡೆಯಬಹುದಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 16.07.2026 ರ ಸಂಜೆ 5.00 ಘಂಟೆ. ಟೆಂಡರ್ ತೆರೆಯುವ ದಿನಾಂಕ 17.07.2026 ರಂದು ಬೆಳಿಗ್ಗೆ 11.00 ಘಂಟೆಗೆ. ಷರತ್ತು ಮತ್ತು ನಿಯಮಗಳಿಗೆ ಒಳಪಟ್ಟಿದ್ದು ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಸಹಾಯಕ ನಿರ್ದೇಶಕರು, ಸಕಲೇಶಪುರರವರ ಕಛೇರಿಯನ್ನು ಸಂಪರ್ಕಿಸಬಹುದಾಗಿದೆ.

ಸಹಿ/- ಮೀನುಗಾರಿಕೆ ಸಹಾಯಕ ನಿರ್ದೇಶಕರು, ಸಕಲೇಶಪುರ.

ವಾಸಾಸಂಇ/ಹಿಸನಿ/ಹಾಸನ/296/ಕೆಎಸ್‌ಎಂಸಿಎ/2026-27

# ಅಧಿಕಾರಿಗಳು ಸರ್ಕಾರದ ಮಾರ್ಗಸೂಚಿ ಪಾಲಿಸಿ

## ಸಾಮಾನ್ಯ ಸಭೆಯಲ್ಲಿ ತಾ.ಪಂ. ಆಡಳಿತಾಧಿಕಾರಿ ಡಾ.ಬಿ.ಕೆ.ರಮೇಶ್ ಸೂಚನೆ

• ಪ್ರಜೋದಯ ವರದಿ

**ಬೇಲೂರು:** ಅಧಿಕಾರಿಗಳು ಸರ್ಕಾರದ ಮಾರ್ಗಸೂಚಿ ಹಾಗು ಮೇಲಾಧಿಕಾರಿಗಳ ಆದೇಶ ಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ, ಸಾರ್ವಜನಿಕರಿಗೆ ಗುಣಮಟ್ಟದ ಸೇವೆ ಒದಗಿ ಸುವತ್ತಾ ಹೆಚ್ಚಿನ ಜವಾಬ್ದಾರಿಯಿಂದ ಕಾರ್ಯನಿರ್ವಹಿಸ ಬೇಕೆಂದು ತಾಲ್ಲೂಕು ಪಂಚಾಯಿತಿ ಆಡಳಿತಾಧಿಕಾರಿ ಡಾ.ಬಿ.ಕೆ.ರಮೇಶ್ ಅವರು ಸೂಚಿಸಿದರು.

ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲಾ ಪಂಚಾಯಿತಿಯಿಂದ ಅನುಮೋದನೆ ಪಡೆದ ಕ್ರಿಯಾ ಯೋಜನೆಯಡಿ ಕೈಗೊಳ್ಳಬೇಕಿರುವ ಕಾಮಗಾರಿಗಳ ಕುರಿತು ಶಾಸಕರ ಅಭಿಪ್ರಾಯ ಪಡೆದು ಕೈಗೊಂಡ ಕ್ರಮದ ಮಾಹಿತಿ ಇನ್ನೂ ಸಲ್ಲಿಸದಿರುವುದಕ್ಕೆ ಅಸಮಾಧಾನ ವ್ಯಕ್ತಪಡಿಸಿ, ಯಾವುದೇ ಕಾಮಗಾರಿ ಆರಂಭಿಸುವ ಮುನ್ನ ಲೈನ್‌ಎಸ್ಟಿಮೇಟ್ ಸಿದ್ಧಪಡಿಸಿ ನಿಯಮಾನುಸಾರ ಮುಂದುವರಿಯುವಂತೆ ತಿಳಿಸಿದರು.

ಜಲ ಜೀವನ್ ಮಿಷನ್ (ಜೆಜೆಎಂ) ಯೋಜನೆಯಡಿ ನಡೆಯುತ್ತಿರುವ ಕುಡಿಯುವ ನೀರಿನ ಕಾಮಗಾರಿಗಳ ಸಮಗ್ರ ಮಾಹಿತಿ ಸಲ್ಲಿಸುವಂತೆ ಸಂಬಂಧಿಸಿದ ಅಧಿಕಾರಿ ಗಳಿಗೆ ಸೂಚಿಸಿದ ಅವರು, ಮಳೆಗಾಲದಲ್ಲಿ ಮಿಂಚು-ಸಿಡಿಲಿನಿಂದ ಜಾನುವಾರುಗಳು ಮೃತಪಟ್ಟರೆ ಪಶು ಸಂಗೋಪನಾ ಇಲಾಖೆ ಅಧಿಕಾರಿಗಳು ತಕ್ಷಣ ಸ್ಥಳಕ್ಕೆ ಭೇಟಿ ನೀಡಿ ಮರಣೋತ್ತರ ಪರೀಕ್ಷೆ ನಡೆಸಿ ವರದಿ ಸಲ್ಲಿಸ ಬೇಕು ಹಾಗು ಅಗತ್ಯ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು ಎಂದರು.

**16 ಸರ್ಕಾರಿ ಶಾಲೆಗಳಲ್ಲಿ ಎಲ್‌ಕೆಜಿ-ಯುಕೆಜಿ**

ಕ್ಷೇತ್ರ ಶಿಕ್ಷಣಾಧಿಕಾರಿ ಭಾಗ್ಯಮ್ಮ ಅವರು ಮಾತನಾಡಿ, ತಾಲ್ಲೂಕಿನ 16 ಸರ್ಕಾರಿ ಶಾಲೆಗಳಲ್ಲಿ ಎಲ್‌ಕೆಜಿ ಹಾಗು



**ಕಾಡಾನೆಗಳ ಸಮಯೋಚಿತ ಮಾಹಿತಿ ನೀಡಿ**

ತಾಲ್ಲೂಕಿನಲ್ಲಿ ಕಾಡಾನೆ ಹಾವಳಿ ಹೆಚ್ಚುತ್ತಿರುವ ಹಿನ್ನಲೆಯಲ್ಲಿ ಸಾರ್ವಜನಿಕರಿಗೆ ಆನೆಗಳ ಚಲನವಲನದ ಬಗ್ಗೆ ಸಮಯೋಚಿತ ಮಾಹಿತಿ ನೀಡಬೇಕು. ಕಾಡಿನಲ್ಲಿ ಯಾವುದೇ ಪ್ರಾಣಿ ಮೃತಪಟ್ಟರೆ 24 ಗಂಟೆಯೊಳಗೆ ಮರಣೋತ್ತರ ಪರೀಕ್ಷೆ ನಡೆಸಿ ರೇಬಿಸ್ ಪರೀಕ್ಷೆಗೂ ಒಳಪಡಿಸ ಬೇಕೆಂದು ಡಾ.ರಮೇಶ್ ಸೂಚಿಸಿದರು.

ಯುಕೆಜಿ ತರಗತಿಗಳನ್ನು ಆರಂಭಿಸಲಾಗಿದ್ದು, ಶಿಕ್ಷಕರಿಗೆ ವಿಶೇಷ ತರಬೇತಿ ನೀಡಿ 1 ರಿಂದ 5ನೇ ತರಗತಿವರೆಗೆ ಕನ್ನಡ ಹಾಗು ಆಂಗ್ಲ ಮಾಧ್ಯಮದಲ್ಲಿ ಬೋಧನೆ ನಡೆಸ ಲಾಗುತ್ತಿದೆಂದು ತಿಳಿಸಿದರು.

ಸರ್ಕಾರಿ ಶಾಲೆಗಳ ದಾಖಲಾತಿ ಹೆಚ್ಚಿಸಲು ವ್ಯಾಪಕ ಪ್ರಚಾರ ನಡೆಸಿದರೂ ನಿರೀಕ್ಷಿತ ಪ್ರಮಾಣದಲ್ಲಿ ದಾಖಲಾತಿಯಾಗಿಲ್ಲ. ವಿದ್ಯಾರ್ಥಿಗಳ ಅನುಕೂಲಕ್ಕಾಗಿ ನಿರ್ಮಿಸಲಾಗುತ್ತಿರುವ 33 ಶೌಚಗೃಹಗಳಲ್ಲಿ ಕೇವಲ 10 ಕಾಮಗಾರಿ ಪೂರ್ಣಗೊಂಡಿದ್ದು, ಉಳಿದ ಕಾಮಗಾರಿ ಗಳನ್ನು ಶೀಘ್ರ ಪೂರ್ಣಗೊಳಿಸುವ ಅಗತ್ಯವಿದೆ ಎಂದು ಹೇಳಿದರು.

> ಕಳೆದ ವರ್ಷಕ್ಕೆ ಹೋಲಿಕೆ ಮಾಡಿದರೆ ಈ ಬಾರಿ ತಾಲ್ಲೂಕಿನಲ್ಲಿ ವಾಡಿಕೆಗಿಂತ ಮಳೆ ಕಡಿಮೆ ಯಾಗಿದ್ದು, ಕಳೆದ ವರ್ಷ ಶೇ.89 ರಷ್ಟು ಬಿತ್ತನೆಯಾಗಿದ್ದರೆ ಈ ಬಾರಿ ಮೆಕ್ಕೆಜೋಳ ಬೆಳೆ ಸೇರಿ ಒಟ್ಟಾರೆ ಬಿತ್ತನೆ ಪ್ರಮಾಣ ಶೇ.20 ರಷ್ಟಿದೆ.
> -ಕಾಂತರಾಜು, ಕೃಷಿ ಸಹಾಯಕ ನಿರ್ದೇಶಕ

ಈ ವೇಳೆ ಮಾತನಾಡಿದ ಡಾ.ರಮೇಶ್ ಅವರು, ವಿವಿಧ ಇಲಾಖೆಗಳ ಅಧಿಕಾರಿಗಳು ತಲಾ ಒಂದು ಸರ್ಕಾರಿ ಶಾಲೆಯನ್ನು ದತ್ತು ಪಡೆದು ಶಿಕ್ಷಕರು, ಪೋಷಕರು ಹಾಗು ವಿದ್ಯಾರ್ಥಿಗ ಳೊಂದಿಗೆ ಸಂವಾದ ನಡೆಸಬೇಕು. ಶಿಕ್ಷಣದ ಗುಣಮಟ್ಟ ಮತ್ತು ಮೂಲಸೌಕರ್ಯ ಅಭಿವೃದ್ಧಿಗೆ ಎಲ್ಲಾ ಇಲಾಖೆಗಳ ಸಹಕಾರ ಅಗತ್ಯ. ಹೈಟೆಕ್ ಶೌಚಗೃಹಗಳ ನಿರ್ಮಾಣ ಕಾಮಗಾರಿ ವಿಳಂಬವಾಗಿರುವುದಕ್ಕೂ ಅಸಮಾಧಾನ ವ್ಯಕ್ತಪಡಿಸಿದರು.

**ಜೆಜೆಎಂ ಕಾಮಗಾರಿ ಪ್ರಗತಿ**

ಜಿಲ್ಲಾ ಪಂಚಾಯಿತಿ ಸಹಾಯಕ ಇಂಜಿನೀಯರ್ ವರುಣ್, ಜೆಜೆಎಂ ಯೋಜನೆಯಡಿ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಕಾಮಗಾರಿ ಪ್ರಗತಿಯಲ್ಲಿದ್ದು, ಕೆಲವೆಡೆ ಜಾಗದ ಸಮಸ್ಯೆ ಯಿಂದ ವಿಳಂಬವಾಗಿದೆ. ಸಮಸ್ಯೆ ಪರಿಹಾರವಾದತಕ್ಷಣ ಕಾಮಗಾರಿ ಪೂರ್ಣಗೊಳಿಸಲಾಗು ವುದೆಂದು ಮಾಹಿತಿ ನೀಡಿದರು.

ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಸತೀಶ್‌ಕುಮಾರ್ ಅವರು ಮಾತ ನಾಡಿ, ಜೆಜೆಎಂ ಕಾಮಗಾರಿಗೆ ಸಂಬಂಧಿಸಿದ ಜಾಗದ ಸಮಸ್ಯೆಯನ್ನು ಶೀಘ್ರ ಬಗೆಹರಿಸಲಾಗುವುದು. ಕೆಲವು ಗ್ರಾಮಗಳಲ್ಲಿ ಕೊಳವೆಬಾವಿಗಳಲ್ಲಿ ಉತ್ತಮ ನೀರು ದೊರೆತಿದ್ದು, ಅವುಗಳನ್ನು ಕುಡಿಯುವ ನೀರಿನ ಯೋಜನೆಗೆ ಸಂಪರ್ಕಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು.

**58 ಕ್ಷಯರೋಗಿಗಳಿಗೆ ಚಿಕಿತ್ಸೆ**

ತಾಲ್ಲೂಕು ಆರೋಗ್ಯಾಧಿಕಾರಿ ಡಾ.ವಿಜಯ್ ಅವರು ಮಾತನಾಡಿ, ರಕ್ತಹೀನತೆ ತಡೆ ಕುರಿತು ವ್ಯಾಪಕ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ತಾಲ್ಲೂಕಿನಲ್ಲಿ 58 ಕ್ಷಯರೋಗಿಗಳಿಗೆ ಚಿಕಿತ್ಸೆ ನೀಡಲಾಗುತ್ತಿದ್ದು, ಅವರಿಗೆ ಅಗತ್ಯ ಪೌಷ್ಟಿಕ ಆಹಾರವನ್ನೂ ಒದಗಿಸಲಾಗುತ್ತಿದೆಂದು ಹೇಳಿದರು.

ಎಚ್‌ಪಿವಿ ಲಸಿಕೆ ಕುರಿತು ಗ್ರಾಮ ಪಂಚಾಯಿತಿ ಪಿಡಿಒಗಳು ಹಾಗೂ ಶಾಲಾ ಮುಖ್ಯ ಶಿಕ್ಷಕರ ಸಭೆ ನಡೆಸಿ ಜಾಗೃತಿ ಮೂಡಿಸಲಾಗುವುದು. ಕ್ಷಯರೋಗಿಗಳಿಗೆ ಅಗತ್ಯ ಔಷಧ ಮತ್ತು ಪೌಷ್ಟಿಕ ಆಹಾರ ಒದಗಿಸಲು ಇಲಾಖೆಯ ಸಂಪೂರ್ಣ ಸಹಕಾರ ನೀಡಲಾಗುವುದೆಂದು ತಿಳಿಸಿದರು. ಸಭೆಯಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ರಾಜ್ಯಸಭೆಯಲ್ಲಿ ಮೂರನೇ ಎರಡರಷ್ಟು ಬಹುಮತದತ್ತ ಎನ್‌ಡಿಎ

• ಪ್ರಜೋದಯ ವರದಿ

**ನವದೆಹಲಿ:** ಪಶ್ಚಿಮ ಬಂಗಾಳದ ಮೂರು ರಾಜ್ಯಸಭಾ ಸ್ಥಾನಗಳಿಗೆ ಉಪಚುನಾವಣೆ ಜುಲೈ 24ರಂದು ನಡೆಯಲಿದ್ದು, ಅದರ ಫಲಿತಾಂಶವು ಆಡಳಿತಾರೂಢ ಬಿಜೆಪಿ ನೇತೃತ್ವದ ಎನ್‌ಡಿಎಯನ್ನು ಮೇಲ್ಮನೆಯಲ್ಲಿ ಮೂರನೇ ಎರಡರಷ್ಟು ಬಹುಮತದ ಹತ್ತಿರ ತರಲಿದೆ.

ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯಲ್ಲಿ ಮಮತಾ ಬ್ಯಾನರ್ಜಿ ನೇತೃತ್ವದ ಟಿಎಂಸಿ ಪರಾಭವ ಅನುಭವಿಸಿದ ಬಳಿಕ ಜೂನ್8 ಮತ್ತು 10ರ ನಡುವೆ ಪಕ್ಷದ ರಾಜ್ಯ ಸಭಾ ಸದಸ್ಯರಾದ ಸುಖೇಂದು ಶೇಖರ್ ರೇ, ಸುಷ್ಮಿತಾ ದೇವ್ ಮತ್ತು ಪ್ರಕಾಶ್ ಚಿಕ್ ಬಾರಿಕ್ ರಾಜೀನಾಮೆ ನೀಡಿದ್ದರು. ಹೀಗಾಗಿ, ಉಪಚುನಾವಣೆ ನಡೆಯುತ್ತಿದೆ.

ಈ ರಾಜೀನಾಮೆಯಿಂದಾಗಿ ರಾಜ್ಯಸಭೆಯಲ್ಲಿ ತೃಣಮೂಲ ಪಕ್ಷದ ಸದಸ್ಯರ ಸಂಖ್ಯೆ ಹತ್ತಕ್ಕೆ ಇಳಿದಿದೆ. ರೇ ಮತ್ತು ಬಾರಿಕ್ ಅವರ ಅಧಿಕಾರಾವಧಿ 2029ರ ಆಗಸ್ಟ್ 18ರ ವರೆಗೆ ಇತ್ತು. ದೇವ್ ಅವರ ಅಧಿಕಾರಾವಧಿ 2030ರ ಏಪ್ರಿಲ್ 2ರಂದು ಮುಗಿಯಲಿತ್ತು. ಪಶ್ಚಿಮ ಬಂಗಾಳ ವಿಧಾನಸಭೆಯಲ್ಲಿ ಪ್ರಸ್ತುತ 293 ಸದಸ್ಯರಿದ್ದಾರೆ. ಒಂದು ಸ್ಥಾನ ಖಾಲಿ ಇದೆ. 207 ಶಾಸಕರನ್ನು ಹೊಂದಿರುವ ಬಿಜೆಪಿಯು ಮೂರು ಸ್ಥಾನಗಳನ್ನು ಸುಲಭ ದಲ್ಲಿ ಗೆಲ್ಲಲಿದೆ. ಆದರೆ, ವಿಭಜಿತ ತೃಣ ಮೂಲ ಕಾಂಗ್ರೆಸ್ ಒಟ್ಟು 80 ಶಾಸಕರನ್ನು ಹೊಂದಿದೆ. ಸುಮಾರು 65 ಶಾಸಕರು ಋತಬ್ರತಾ ಬ್ಯಾನರ್ಜಿ ನೇತೃತ್ವದ ಬಂಡಾಯ ಗುಂಪಿನಲ್ಲಿದ್ದಾರೆ ಮತ್ತು ಉಳಿದವರು ಮಮತಾ ಅವರೊಂದಿಗೆ ಇದ್ದಾರೆ. ತೃಣಮೂಲದ ಎರಡೂ ಬಣಗಳು ಅಭ್ಯರ್ಥಿಗಳನ್ನು ಕಣಕ್ಕಿಳಿಸುತ್ತವೆಯೇ ಎಂಬುದನ್ನು ಕಾದು ನೋಡಬೇಕು.

ಈ ಚುನಾವಣಾ ಫಲಿತಾಂಶವು ಬಿಜೆಪಿ ಪಾಳಯಕ್ಕೆ ಹರ್ಷ ತರಲಿದೆ. ಏಕೆಂದರೆ, ಈ ಫಲಿತಾಂಶವು ಮೇಲ್ಮನೆಯಲ್ಲಿ ಎನ್‌ಡಿಎ ಸಂಖ್ಯಾಬಲವನ್ನು 154ಕ್ಕೆ ಕೊಂಡೊಯ್ಯುತ್ತದೆ. ಮೇಲ್ಮನೆಯಲ್ಲಿ ಮೂರನೇ ಎರಡರಷ್ಟು ಬಹುಮತಕ್ಕೆ ಕೇವಲ ಒಂಬತ್ತು ಸಂಖ್ಯೆ ಕಡಿಮೆ ಆಗಲಿದೆ. ಕೇಂದ್ರ ಸರ್ಕಾರವು ಮುಂಬರುವ ಅಧಿವೇಶನದಲ್ಲಿ ಸಂವಿಧಾನ ತಿದ್ದುಪಡಿ ಮಾಡುವ ಕೆಲವು ಮಸೂದೆಗಳನ್ನು ತರಲು ಉದ್ದೇಶಿಸಿದೆ.

245 ಸದಸ್ಯರ ಸದನದಲ್ಲಿ ಬಿಜೆಪಿ ಸದ್ಯ 114 ಸದಸ್ಯರನ್ನು ಹೊಂದಿದೆ. ಮೇಲ್ಮನೆಯಲ್ಲಿ ಸರಳ ಬಹುಮತಕ್ಕೆ 123 ಸದಸ್ಯ ಬಲದ ಅಗತ್ಯ ಇದೆ. ಪ್ರಸ್ತುತ ಎನ್‌ಡಿಎಯಲ್ಲಿ ಏಳು ನಾಮ ನಿರ್ದೇಶಿತ ಸಂಸದರು ಮತ್ತು ಮೂವರು ಪಕ್ಷೇತರರು ಸೇರಿದಂತೆ 151 ಸಂಸದರಿದ್ದಾರೆ. ಇಂಡಿಯಾ ಮೈತ್ರಿ ಕೂಟದ ಸದಸ್ಯರ ಸಂಖ್ಯೆ 64ಕ್ಕೆ ಇಳಿದಿದೆ. ಡಿಎಂಕೆಯ 8, ಬಿಜೆಡಿಯ5ಮತ್ತು ಎಎಪಿಯ 3 ಸೇರಿ 27 ಅಲಿಪ್ತ ಸಂಸ ದರಿದ್ದಾರೆ. ಅವರಲ್ಲಿ ಕನಿಷ್ಠ 19 ಮಂದಿ ಬಿಜೆಪಿಯನ್ನು ವಿರೋಧಿಸಲು ಒಲವು ತೋರುತ್ತಿದ್ದಾರೆ.

# ಕಾಫಿ ತೋಟದಲ್ಲಿ ಕಾಡಾನೆಗಳ ಹಾವಳಿ: ಬೆಳೆ ಹಾನಿ

• ಪ್ರಜೋದಯ ವರದಿ

**ಸಕಲೇಶಪುರ:** ತಾಲ್ಲೂಕಿನ ವಳಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕರಡಿಗಾಲ ಗ್ರಾಮದ ಸುತ್ತಮುತ್ತ ಕಳೆದ ಮೂರು ದಿನಗಳಿಂದ ಮೂರು ಕಾಡಾನೆ ಗಳು ಬೀಡು ಬಿಟ್ಟಿದ್ದು, ಕಾಫಿ ತೋಟಗಳಿಗೆ ನುಗ್ಗಿ ಅಪಾರ ಪ್ರಮಾಣದ ಬೆಳೆ ಹಾನಿ ಉಂಟುಮಾಡುತ್ತಿವೆ.

ಕಾಡಾನೆಗಳ ಹಾವಳಿಯಿಂದ ಕೆ.ಎಸ್. ಕಿರಣ್, ದಿವಾಕರ್, ಮದನ್ ಹಾಗು ಮೋಹನ್ ಅವರ ಕಾಫಿ ತೋಟಗಳಿಗೆ ಹೆಚ್ಚಿನ ಹಾನಿಯಾಗಿದೆ. ಫಸಲಿಗೆ ಬಂದಿದ್ದ ಸುಮಾರು 50ಕ್ಕೂ ಹೆಚ್ಚು ಕಾಫಿ ಗಿಡಗಳನ್ನು ಕಾಡಾನೆಗಳು ಬುಡಸಮೇತ ತುಳಿದು ನಾಶಪಡಿಸಿದ್ದು, ಬಾಳೆ ಹಾಗು ತೆಂಗಿನ ಮರ ಗಳನ್ನೂ ಮುರಿದು ಹಾಕಿವೆ. ಹಲವು ವರ್ಷ ಗಳ ಶ್ರಮದಿಂದ ಬೆಳೆಸಿದ ಕಾಫಿ ಗಿಡಗಳು ಕ್ಷಣಾರ್ಧದಲ್ಲಿ ನಾಶವಾಗಿರುವು ದರಿಂದ ಬೆಳೆಗಾರರು ಕಂಗಾಲಾಗಿದ್ದಾರೆ. ಫಸಲು ಮೂಡುವ ಪ್ರಮುಖ ಹಂತದಲ್ಲೇ ಕಾಡಾನೆ ಗಳ ದಾಳಿಯಿಂದ ಬೆಳೆಗಾರರು ಆತಂಕ ಹಾಗು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ.

ಮಾಹಿತಿ ತಿಳಿಯುತ್ತಿದ್ದಂತೆಯೇ ಯಸ ಳೂರು ವಲಯ ಅರಣ್ಯಾಧಿಕಾರಿ ರೇವಣ ಸಿದ್ಧಯ್ಯ ಹಿರೇಮಠ್ ಅವರು ಇಟಿಎಫ್ ಸಿಬ್ಬಂದಿಯೊಂದಿಗೆ ಸ್ಥಳಕ್ಕೆ ಭೇಟಿ ನೀಡಿ ಹಾನಿಗೊಳಗಾದ ತೋಟಗಳನ್ನು ಪರಿಶೀಲಿಸಿ




ದರು. ರೈತರಿಂದ ಮಾಹಿತಿ ಪಡೆದು ಬೆಳೆ ಹಾನಿಯ ವಿವರ ದಾಖಲಿಸಿ ಕೊಂಡರು.

ಈ ವೇಳೆ ಗ್ರಾಮಸ್ಥರು ಹಾಗು ಬೆಳೆಗಾರರ ಸಂಘದ ಪದಾಧಿಕಾರಿಗಳು, ಕಾಡಾನೆಗಳನ್ನು ತಕ್ಷಣ ಸೆರೆಹಿಡಿದು ಸುರಕ್ಷಿತ ಅರಣ್ಯ ಪ್ರದೇಶಕ್ಕೆ ಸ್ಥಳಾಂತರಿಸಬೇಕೆಂದು ಆಗ್ರಹಿಸಿದರು. ಕಾಡಾನೆಗಳ ಭೀತಿಯಿಂದ ತೋಟ ಗಳಿಗೆ ತೆರಳಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿದ್ದು, ಫಸಲು ಹಂತದಲ್ಲಿರುವ ಕಾಫಿ ಗಿಡಗಳು ನಾಶವಾದರೆ ಮತ್ತೆ ಉತ್ಪಾದನೆಗೆ ಬರಲು 10ರಿಂದ 15 ವರ್ಷ ಗಳು ಬೇಕಾಗುತದೆಂದು ಅಳಲು ತೋಡಿ ಕೊಂಡರು.

ಕಾಡಾನೆಗಳನ್ನು ಸ್ಥಳಾಂತರಿಸುವವರೆಗೆ ಕರಡಿಗಾಲ ಹಾಗು ಸುತ್ತಮುತ್ತಲಿನ ಪ್ರದೇಶ ದಲ್ಲಿ ಇಟಿಎಫ್ ಸಿಬ್ಬಂದಿಯನ್ನು ನಿರಂತರ ವಾಗಿ ನಿಯೋಜಿಸಿ, ಬೆಳೆಗಾರರ ಜೀವ ಮತ್ತು ಆಸ್ತಿಗೆ ಸೂಕ್ತ ರಕ್ಷಣೆ ಒದಗಿಸಬೇಕೆಂದು ಗ್ರಾಮಸ್ಥರು ಒತ್ತಾಯಿಸಿದರು.

ರೈತರ ಸಮಸ್ಯೆಯನ್ನು ಆಲಿಸಿದ ಅರಣ್ಯಾಧಿಕಾರಿ ರೇವಣಸಿದ್ದಯ್ಯ ಹಿರೇಮಠ್, ಕರಡಿ ಗಾಲ ಭಾಗದಲ್ಲಿ ಕಾಡಾನೆಗಳ ಹಾವಳಿಯನ್ನು ಇಲಾಖೆ ಗಂಭೀರವಾಗಿ ಪರಿಗಣಿಸಿದೆ. ಬೆಳೆ ಹಾನಿಯ ವರದಿಯನ್ನು ಮೇಲಾಧಿಕಾರಿ ಗಳಿಗೆ ಸಲ್ಲಿಸಿ, ಸರ್ಕಾರದ ನಿಯಮಾನುಸಾರ ರೈತರಿಗೆ ಶೀಘ್ರ ಪರಿಹಾರ ದೊರಕುವಂತೆ ಕ್ರಮ ಕೈಗೊಳ್ಳಲಾಗುವುದು. ಜೊತೆಗೆ ಕಾಡಾನೆಗಳ ನಿಯಂತ್ರಣ ಹಾಗೂ ಸ್ಥಳಾಂತ ರಕ್ಕೂ ಅಗತ್ಯ ಕ್ರಮ ಕೈಗೊಳ್ಳಲಾಗುವುದೆಂದು ಭರವಸೆ ನೀಡಿದರು.

# ಜು.10 ರಂದು ಜಿಲ್ಲಾಧಿಕಾರಿ ಕಚೇರಿಗೆ ಅಂಗನವಾಡಿ ನೌಕರರ ಮುತ್ತಿಗೆ

» ಮೊದಲನೇ ಪುಟದಿಂದ

ಅನುದಾನವನ್ನು ವರ್ಷಗಳಿಂದ ಹೆಚ್ಚಿಸದ ಪರಿಣಾಮ ಮಕ್ಕಳಿಗೆ ನೀಡುವ ಪೌಷ್ಟಿಕ ಆಹಾರ, ಶಾಲಾ ಪೂರ್ವ ಶಿಕ್ಷಣ ಹಾಗು ಮೂಲಸೌಕರ್ಯಗಳು ಹಿನ್ನಡೆ ಅನುಭವಿಸುತ್ತಿವೆ ಎಂದು ದೂರಿದರು.

ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಯಿಂದ 3-6 ವರ್ಷದ ಮಕ್ಕಳನ್ನು ಸರ್ಕಾರಿ ಶಾಲೆಗಳ ಎಲ್‌ಕೆಜಿ-ಯುಕೆಜಿತರಗತಿಗಳಿಗೆವರ್ಗಾಯಿಸಲಾಗುತ್ತಿದ್ದು, ಅಂಗನವಾಡಿ ಕೇಂದ್ರಗಳ ಅಸ್ತಿತ್ವವೇ ಸಂಕಷ್ಟಕ್ಕೆ ಸಿಲುಕಿದೆ. ಪೌಷ್ಟಿಕ ಆಹಾರ ಪೂರೈಕೆಯನ್ನು ಖಾಸಗಿ ಸಂಸ್ಥೆಗಳ ಮೂಲಕ ನಡೆಸುವ ಪ್ರಯತ್ನ ನಡೆಸಲಾಗುತ್ತಿದೆ ಎಂದು ಆರೋಪಿಸಿದರು.

ಗುಣಮಟ್ಟದ ಮೊಬೈಲ್, ಟ್ಯಾಬ್ಲೆಟ್ ಹಾಗೂ ಇಂಟರ್‌ನೆಟ್ ವ್ಯವಸ್ಥೆ ನೀಡದೆ ಆನ್‌ಲೈನ್ ಕಾರ್ಯನಿರ್ವಹಣೆ ನಿರೀಕ್ಷಿಸುವುದು ಸರಿಯಲ್ಲ. ಜನಗಣತಿ, ಎಸ್‌ಐಆರ್, ವಿವಿಧ ಸಮೀಕ್ಷೆಗಳು ಸೇರಿ ಇಲಾಖೇತರ ಕೆಲಸಗಳ ಹೊರೆ ಹೆಚ್ಚುತ್ತಿರುವುದರಿಂದ ಅಂಗನವಾಡಿ ಕಾರ್ಯಕರ್ತೆಯರು ತಮ್ಮ ಮೂಲ ಕರ್ತವ್ಯಗಳನ್ನು ಸಮರ್ಪಕವಾಗಿ ನಿರ್ವಹಿಸಲು ಸಾಧ್ಯವಾಗುತ್ತಿಲ್ಲ. ಇಂತಹ ಹೆಚ್ಚುವರಿ ಕೆಲಸಗಳಿಂದ ತಕ್ಷಣವೇ ಮುಕ್ತಗೊಳಿಸಬೇಕೆಂದು ಒತ್ತಾಯಿಸಿದರು.

ಅಕ್ಷರ ದಾಸೋಹ ಯೋಜನೆ 25 ವರ್ಷ ಪೂರೈಸಿದ್ದರೂ ಬಿಸಿಯೂಟ ನೌಕರರ ವೇತನದಲ್ಲಿ ಯಾವುದೇ ಗಣನೀಯ ಏರಿಕೆ ಮಾಡಿಲ್ಲ. ಯೋಜನೆಯನ್ನು ಖಾಸಗಿ ಸಂಸ್ಥೆಗಳಿಗೆ ವಹಿಸುವ ಪ್ರಸ್ತಾಪಗಳನ್ನು ಕೈಬಿಟ್ಟು, ಸರ್ಕಾರವೇ ಸಂಪೂರ್ಣ ಜವಾಬ್ದಾರಿ ಹೊತ್ತು ಮುಂದುವರಿಸಬೇಕೆಂದು ಆಗ್ರಹಿಸಿದರು.

ರಾಜ್ಯ ಸರ್ಕಾರ ಚುನಾವಣಾ ಸಂದರ್ಭದಲ್ಲಿ ನೀಡಿದ್ದ ಭರವಸೆಯಂತೆ ಅಂಗನವಾಡಿ ಕಾರ್ಯಕರ್ತೆಯರಿಗೆ 15,000 ರೂ. ಹಾಗೂ ಸಹಾಯಕಿಯರಿಗೆ 10,000 ರೂ. ವೇತನ ಹೆಚ್ಚಳ ಜಾರಿಗೊಳಿಸಬೇಕು. ಬಿಸಿಯೂಟ ನೌಕರರಿಗೆ 7,000 ರೂ.ವೇತನ ಹೆಚ್ಚಳ ನೀಡಬೇಕು. ಅಂಗನವಾಡಿ ನೌಕರರನ್ನು ಖಾಯಂಗೊಳಿಸಿ ಕಾರ್ಮಿಕ ಕಾನೂನುಗಳ ವ್ಯಾಪ್ತಿಗೆ ತರಬೇಕು. 45ನೇ ಭಾರತೀಯ ಕಾರ್ಮಿಕ ಸಮ್ಮೇಳನದ ಶಿಫಾರಸ್ಸಿನಂತೆ ಕನಿಷ್ಠ ವೇತನ, ಸಾಮಾಜಿಕ ಭದ್ರತೆ, ಪಿಂಚಣಿ, ಗ್ರಾಚ್ಯುಟಿ ಹಾಗೂ ಆರೋಗ್ಯ ವಿಮೆ ಸೇರಿ ಎಲ್ಲಾ ಸೌಲಭ್ಯಗಳನ್ನು ಒದಗಿಸಬೇಕೆಂದು ಒತ್ತಾಯಿಸಿದರು.

ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘದ ಜಿಲ್ಲಾಧ್ಯಕ್ಷೆ ಎಂ.ಬಿ.ಪುಷ್ಪ, ಖಜಾಂಚಿ ಜಿ.ಪಿ.ಶೈಲಜಾ, ಉಪಾಧ್ಯಕ್ಷರಾದ ಮೀನಾಕ್ಷಿ, ಕಾಮಾಕ್ಷಿರಾಜು, ಸಿಐಟಿಯು ಮುಖಂಡ ಅರವಿಂದ್ ಇದ್ದರು.

## ಸಾರ್ವಜನಿಕರ ಅಹವಾಲು ಆಲಿಸಿದ ಸಂಸದ

» ಮೊದಲನೇ ಪುಟದಿಂದ

ಪಾರದರ್ಶಕ ಸೇವೆಯನ್ನು ಒದಗಿಸುವ ಸಂಕಲ್ಪದೊಂದಿಗೆ ಪ್ರತಿಯೊಂದು ಮನವಿಗೂ ನ್ಯಾಯಯುತ ಪರಿಹಾರ ದೊರಕುವಂತೆ ನಿರಂತರವಾಗಿ ಶ್ರಮಿಸಲಾಗುವುದೆಂದರು. ಸಾರ್ವಜನಿಕರೊಂದಿಗೆ ನೇರ ಸಂಪರ್ಕದಲ್ಲಿದ್ದು ಅವರ ಅಭಿಪ್ರಾಯ, ಸಲಹೆ ಹಾಗು ಸಮಸ್ಯೆಗಳನ್ನು ಆಲಿಸುವ ಇಂತಹ ಭೇಟಿ ಕಾರ್ಯಕ್ರಮಗಳು ಜನಸೇವೆಯನ್ನು ಮತ್ತಷ್ಟು ಪರಿಣಾಮಕಾರಿಯಾಗಿ ರೂಪಿಸಲು ಸಹಕಾರಿಯಾಗುತ್ತವೆ. ಜಿಲ್ಲೆಯ ಸಮಗ್ರ ಅಭಿವೃದ್ಧಿ ಹಾಗು ಜನರ ಕಲ್ಯಾಣವೇ ನಮ್ಮ ಪ್ರಮುಖ ಗುರಿಯಾಗಿದ್ದು, ಅದಕ್ಕಾಗಿ ನಿರಂತರವಾಗಿ ಶ್ರಮಿಸುತ್ತೇನೆಂದು ತಿಳಿಸಿದರು.

# ಎಸ್‌ಐಆರ್ ಪ್ರಕ್ರಿಯೆಯಲ್ಲಿ ಶಾಸಕ ಸ್ವರೂಪ್ ಭಾಗಿ



• ಪ್ರಜೋದಯ ವರದಿ

**ಹಾಸನ:** ರಾಜ್ಯಾದ್ಯಂತ ನಡೆಯುತ್ತಿರುವ ಮತದಾರ ಪಟ್ಟಿ ವಿಶೇಷ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಲ್ಲಿ ಶಾಸಕ ಹೆಚ್.ಪಿ.ಸ್ವರೂಪ್ ಅವರು ಭಾಗವಹಿಸಿ ಅರ್ಜಿ ನಮೂನೆ ಭರ್ತಿ ಮಾಡುವ ಮೂಲಕ ಅಧಿಕಾರಿಗಳಿಗೆ ಸಹಕಾರ ನೀಡಿದರು.

ತಹಶೀಲ್ದಾರ್ ಗೀತಾ ಹಾಗು ಬಿಎಲ್‌ಒ ಅಧಿಕಾರಿಗಳು ಶಾಸಕ ಸ್ವರೂಪ್ ಅವರ ನಿವಾಸಕ್ಕೆ ಭೇಟಿ ನೀಡಿ ಎಸ್‌ಐಆರ್ ಪ್ರಕ್ರಿಯೆಯ ಕುರಿತು ಮಾಹಿತಿ ನೀಡಿದರು. ಬಳಿಕ ಶಾಸಕರು ತಮ್ಮ ಕುಟುಂಬದ ಎಲ್ಲಾ ಸದಸ್ಯರ ಮಾಹಿತಿಯನ್ನು ನೀಡಿ ಅರ್ಜಿ ನಮೂನೆಗಳನ್ನು ಭರ್ತಿ ಮಾಡಿ ಅಧಿಕಾರಿಗಳಿಗೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕರು, ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಜಾಪ್ರಭುತ್ವದ ಮಹತ್ವದ ಪ್ರಕ್ರಿಯೆಯಾಗಿದೆ. ಪ್ರತಿಯೊಬ್ಬ ನಾಗರಿಕರೂ ಇದರಲ್ಲಿ ತಪ್ಪದೇ ಭಾಗವಹಿಸಿ, ಮನೆ ಮನೆಗೆ ಬರುವ ಅಧಿಕಾರಿಗಳಿಗೆ ಅಗತ್ಯ ಮಾಹಿತಿ ನೀಡಿ ಸಹಕರಿಸಬೇಕು. ಎಲ್ಲರ ಸಹಕಾರದಿಂದ ಮತದಾರರ ಪಟ್ಟಿ ಇನ್ನಷ್ಟು ನಿಖರ ಹಾಗೂ ಸಮರ್ಪಕವಾಗಲಿದೆ ಎಂದು ಮನವಿ ಮಾಡಿದರು.

# ಅರೇಹಳ್ಳಿ ರೋಟರಿ ಸಂಸ್ಥೆಗೆ ಮಹಂತ್ ನಾರ್ವೆ ಅಧ್ಯಕ್ಷ



• ಪ್ರಜೋದಯ ವರದಿ

**ಅರೇಹಳ್ಳಿ:** ಬೇಲೂರು ತಾಲ್ಲೂಕು ಅರೇಹಳ್ಳಿ ರೋಟರಿ ಸಂಸ್ಥೆ ಅಧ್ಯಕ್ಷರಾಗಿ ಮಹಂತ್ ನಾರ್ವೆ ಆಯ್ಕೆಯಾಗಿದ್ದಾರೆ. 2026-27ನೇ ಸಾಲಿನ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ರೋಟರಿ ಭವನದಲ್ಲಿ ನೆರವೇರಿತು.

ನೂತನ ಅಧ್ಯಕ್ಷ ಮಹಂತ್ ನಾರ್ವೆ ಅವರು ಮಾತನಾಡಿ, ಸ್ವಾರ್ಥಕ್ಕಿಂತ ಸೇವೆ ಮುಖ್ಯ ಎಂಬ ರೋಟರಿಯ ಧ್ಯೇಯವಾಕ್ಯದಡಿ ಕೆಲಸ ಮಾಡಲಾಗುವುದು. ರಸ್ತೆ ಸುರಕ್ಷತೆ, ಬಾಲ ವಿಕಾಸ ಮತ್ತು ವಿಶೇಷ ಚೇತನ ಮಕ್ಕಳ ಸಬಲೀಕರಣ, ಸ್ವಚ್ಛ ಪರಿಸರ ಮತ್ತು ತ್ಯಾಜ್ಯ ನಿರ್ವಹಣೆ, ಮಾದಕ ವ್ಯಸನ ವಿರುದ್ಧದ ಕಾರ್ಯಕ್ರಮಗಳನ್ನು ಹಂತ ಹಂತವಾಗಿ ಹಮ್ಮಿಕೊಳ್ಳಲಾಗುವುದು. ಇವು ಕೇವಲ ಯೋಜನೆಗಳಲ್ಲ. ಸಮಾಜದಲ್ಲಿ ಶಾಶ್ವತ ಮತ್ತು ಅರ್ಥಪೂರ್ಣ ಬದಲಾವಣೆ ತರಬೇಕೆಂಬ ನಮ್ಮ ಬದ್ಧತೆಯ ಪ್ರತೀಕಗಳಾಗಿವೆ ಎಂದು ಹೇಳಿದರು.

ರೋಟರಿ ಜಿಲ್ಲಾ ರಾಜ್ಯಪಾಲ ರೋ. ವಸಂತ್ ಹೋಬ್ಳಿದಾರ್ ಅವರು ಮಾತನಾಡಿ, ಪ್ರಕೃತಿ ರೀತಿಯ ಬದಲಾವಣೆಯು ಕೂಡ ರೋಟರಿ ಸಂಸ್ಥೆಯಲ್ಲಿದೆ. ಪರಸ್ಪರ ಸ್ನೇಹ ಹಾಗು ಒಡನಾಟವನ್ನು ಸೃಷ್ಟಿಸುವುದೇ ರೋಟರಿ ಧ್ಯೇಯ. ಜನರ ಮನಸ್ಸು ಮುಟ್ಟುವಂತಹ ಸೇವೆ ಮಾಡಿದರೆ ಸಂಸ್ಥೆಯನ್ನು ಜನಸಾಮಾನ್ಯರು ಎಂದೆಂದಿಗೂ ನೆನೆಯುತ್ತಾರೆ. ಬದಲಾವಣೆ ಮೊದಲು ನಮ್ಮಿಂದ ಪ್ರಾರಂಭವಾದರೆ ಮಾತ್ರ ರೋಟರಿ ಸಂಸ್ಥೆಯ ಕಾರ್ಯಚಟುವಟಿಕೆಗಳು ಸಹ ಅಗತ್ಯಕ್ಕೆ ತಕ್ಕಂತೆ ಬದಲಾಗುತ್ತದೆಂದರು.

ರೋಟರಿ ಕಾರ್ಯದರ್ಶಿ ವಿಜಯ್, ಖಜಾಂಚಿ ಆರ್.ರಘುನಂದನ್, ಸಹಾಯಕ ಗವರ್ನರ್ ಗಣೇಶ್, ವೀರೇಂದ್ರ ಮೊದಲಾದವರಿದ್ದರು.

# ಬಿಎಲ್‌ಒಗಳ ಕರ್ತವ್ಯ ಸುಗಮವಾಗಿ ಸಾಗುತ್ತಿದೆ

## ಶೇ.80ರಷ್ಟು ಅರ್ಜಿ ವಿತರಣೆ | ತಹಶೀಲ್ದಾರ್ ಶ್ರೀಧರ್ ಕಂಕಣವಾಡಿ

• ಪ್ರಜೋದಯ ವರದಿ



**ಬೇಲೂರು:** ತಾಲ್ಲೂಕಿನ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಸುಗಮವಾಗಿ ನಡೆಯುತ್ತಿದ್ದು, ಈಗಾಗಲೇ ಸುಮಾರು ಶೇ.80 ರಷ್ಟು ಮಾಹಿತಿ ಫಾರ್ಮ್‌ಗಳ ವಿತರಣೆ ಪೂರ್ಣಗೊಂಡಿದೆ ಎಂದು ತಹಶೀಲ್ದಾರ್ ಶ್ರೀಧರ್ ಕಂಕಣವಾಡಿ ತಿಳಿಸಿದ್ದಾರೆ.

ಬಿಎಲ್‌ಒಗಳು ಉತ್ತಮ ರೀತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಸಾರ್ವಜನಿಕರಿಂದಲೂ ಉತ್ತಮ ಸಹಕಾರ ದೊರೆಯುತ್ತಿದೆ. ಡಿಜಿಟಲೈಸೇಶನ್ ಕಾರ್ಯವೂ ವೇಗವಾಗಿ ಸಾಗುತ್ತಿದೆ. ಇದುವರೆಗೆ ಸುಮಾರು 30 ಸಾವಿರ ಫಾರ್ಮ್‌ಗಳ ಡಿಜಿಟಲೈಸೇಶನ್ ಪೂರ್ಣಗೊಂಡಿದೆ ಎಂದು ಮಾಹಿತಿ ನೀಡಿದರು.

ಸಾರ್ವಜನಿಕರಿಗೆ ಯಾವುದೇ ಗೊಂದಲ ಅಥವಾ ತೊಂದರೆ ಉಂಟಾದಲ್ಲಿ ನೆರವು ನೀಡಲು ತಾಲ್ಲೂಕು ಕಚೇರಿಯಲ್ಲಿ ವಿಶೇಷ ಸಹಾಯ ಕೇಂದ್ರವನ್ನು ತೆರೆಯಲಾಗಿದೆ. 1950 ಸಹಾಯವಾಣಿ ಸಂಖ್ಯೆಗೆ ಕರೆ ಮಾಡಿ ಅಗತ್ಯ ಮಾಹಿತಿ ಹಾಗೂ ಮಾರ್ಗದರ್ಶನ ಪಡೆಯಬಹುದೆಂದರು.

ಬಿಎಲ್‌ಒಗಳು ಮನೆಗೆ ಭೇಟಿ ನೀಡುವಾಗ ಸಾರ್ವಜ ನಿಕರು ತಮ್ಮ ಇತ್ತೀಚಿನ ಭಾವಚಿತ್ರ, ಚಾಲ್ತಿಯಲ್ಲಿರುವ ಮೊಬೈಲ್ ಸಂಖ್ಯೆ ಹಾಗೂ ಸಾಧ್ಯವಾದರೆ 2002ರ ಮತದಾರರ ಪಟ್ಟಿಯ ಲ್ಲಿರುವ ತಮ್ಮ ಅಥವಾ ಕುಟುಂಬದ ಸದಸ್ಯರ ವಿವರಗಳನ್ನು ಸಿದ್ಧವಾಗಿಟ್ಟುಕೊಳ್ಳ ಬೇಕೆಂದು ಮನವಿ ಮಾಡಿದರು.

ಬಿಎಲ್‌ಒಗಳು ನೀಡುವ ಮಾಹಿತಿ ಫಾರ್ಮ್ ಅನ್ನು ಸರಿಯಾಗಿ ಭರ್ತಿ ಮಾಡಿ ಹಿಂತಿರುಗಿಸಿದ ಬಳಿಕ, ಅವರು ಸಹಿ ಮಾಡಿದ ಸ್ವೀಕೃತಿ ರಸೀದಿಯನ್ನು ನೀಡುತ್ತಾರೆ. ಆ ರಸೀದಿಯನ್ನು ಸುರಕ್ಷಿತವಾಗಿ ಜೋಪಾನವಾಗಿಟ್ಟುಕೊಳ್ಳುವಂತೆ ಸಲಹೆ ನೀಡಿದರು.

ಸಾರ್ವಜನಿಕರ ಅನುಕೂಲಕ್ಕಾಗಿ ಭೌತಿಕ ಫಾರ್ಮ್‌ಗಳ ಜೊತೆಗೆ ಆನ್‌ಲೈನ್ ಮೂಲಕವೂ ಮಾಹಿತಿ ಸಲ್ಲಿಸುವ ಅವಕಾಶ ಕಲ್ಪಿಸಲಾಗಿದೆ. ಪ್ರತಿಯೊಂದು ಗ್ರಾಮ ಪಂಚಾಯಿತಿ ಹಾಗೂ ಮತಗಟ್ಟೆ ವ್ಯಾಪ್ತಿಯಲ್ಲಿ ಬಿಎಲ್‌ಒ ಫೆಸಿಲಿಟಿ ಸೆಂಟರ್ ಮತ್ತು ವೋಟರ್ ಫೆಸಿಲಿಟಿ ಸೆಂಟರ್‌ಗಳನ್ನು ಆರಂಭಿಸಲಾಗಿದ್ದು, ಸಮಸ್ಯೆಗಳಿದ್ದರೆ ಚುನಾವಣಾ ಶಾಖೆಯನ್ನು ಸಂಪರ್ಕಿಸಿ ಪರಿಹಾರ ಪಡೆಯಬಹುದೆಂದು ತಿಳಿಸಿದರು.

ಈ ವೇಳೆ ಮತದಾರರ ನೋಂದಣಿ ಕರ್ತವ್ಯದಲ್ಲಿದ್ದ ಬಿಎಲ್‌ಒ ಒಬ್ಬರು ತೀವ್ರ ಸುಸ್ತಿನಿಂದ ಅಸ್ವಸ್ಥರಾಗಿದ್ದ ಘಟನೆ ಕುರಿತು ಪ್ರತಿಕ್ರಿಯಿಸಿದ ತಹಶೀಲ್ದಾರ್ ಶ್ರೀಧರ್ ಕಂಕಣವಾಡಿ, ಸಾರ್ವ ಜನಿಕರು ಹಾಗೂ ಬಿಎಲ್‌ಒ ಸೂಪರ್‌ವೈಸರ್ ಅವರ ತಕ್ಷಣದ ನೆರವಿನಿಂದ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಅವರು ವಿಶೇಷ ವಾರ್ಡ್‌ನಲ್ಲಿ ಚಿಕಿತ್ಸೆ ಪಡೆಯುತ್ತಿದ್ದು ಚೇತರಿಸಿಕೊಳ್ಳುತ್ತಿದ್ದಾರೆಂದು ಹೇಳಿದರು.

# ನಿಗದಿತ ಗಡುವಿನೊಳಗೆ ಕೆಲಸ ಮುಗಿಸಲು ಸೂಚನೆ



• ಪ್ರಜೋದಯ ವರದಿ

**ಬೇಲೂರು:** ಪಟ್ಟಣದಲ್ಲಿ ಕುಂಟುತ್ತಾ ಸಾಗಿರುವ ರಸ್ತೆ ಕಾಮಗಾರಿಗೆ ವೇಗ ನೀಡಲಾಗುವುದೆಂದು ಪುರಸಭೆ ಅಧ್ಯಕ್ಷ ಅಕ್ರಂ ಷರೀಫ್ ಅವರು ಹೇಳಿದರು.

ಪಟ್ಟಣದ 22ನೇ ವಾರ್ಡ್‌ನಲ್ಲಿ ಮಳೆ ಹಿನ್ನಲೆಯಲ್ಲಿ ಕಾಮಗಾರಿ ಸ್ಥಗಿತಗೊಂಡಿರುವ ಸ್ಥಳಕ್ಕೆ ಭೇಟಿ ನೀಡಿ ಮಾತನಾಡಿದ ಅವರು, ಅರ್ಧಂಬರ್ಧ ಕೆಲಸದಿಂದಾಗಿ ಸಾರ್ವಜನಿಕರ ಸಂಚಾರಕ್ಕೆ ಭಾರೀ ತೊಂದರೆಯಾಗುತ್ತಿದೆ. ನಿಗದಿತ ಅವಧಿಯೊಳಗೆ ಕೆಲಸ ಮುಗಿಸುವಂತೆ ಗುತ್ತಿಗೆದಾರರು ಹಾಗು ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದರು.

ಕಳೆದ ಕೆಲ ದಿನಗಳಿಂದ ನಿರಂತರವಾಗಿ ಮಳೆ ಸುರಿಯುತ್ತಿರುವುದರಿಂದ ಸಮಸ್ಯೆಯಾಗಿದೆ. ಮಳೆ ಕಡಿಮೆಯಾದ ಕೂಡಲೇ 22ನೇ ವಾರ್ಡ್ ಸೇರಿ ವಿವಿಧ ವಾರ್ಡ್‌ಗಳಲ್ಲಿ ನಿಂತಿರುವ ಕೆಲಸ ಮಾಡಿಸಲಾಗುವುದು. ಈಗ ತಾತ್ಕಾಲಿಕವಾಗಿ ಜನರು ಓಡಾಡಲು ಅನುಕೂಲವಾಗುವಂತೆ ಕ್ರಮ ಕೈಗೊಳ್ಳಲಾಗುವುದೆಂದರು.

ರಸ್ತೆ ದುಸ್ಥಿತಿಯಿಂದ ಶಾಲಾ ಮಕ್ಕಳು, ವೃದ್ಧರು, ದ್ವಿಚಕ್ರ ವಾಹನ ಸವಾರರ ಪ್ರತಿದಿನದ ಸಂಚಾರಕ್ಕೆ ತೊಂದರೆಯಾಗುತ್ತಿದೆ. ಮಳೆಗಾಲದಲ್ಲಿ ರಸ್ತೆ ಕೆಸರುಮಯವಾಗಿ ಅಪಘಾತದ ಭೀತಿ ಹೆಚ್ಚಾಗಿದೆ ಎಂದು ನಿವಾಸಿಗರು ಪುರಸಭೆ ಅಧ್ಯಕ್ಷ ಅಕ್ರಂ ಹಾಗು ಮುಖ್ಯಾಧಿಕಾರಿ ಗಮನಕ್ಕೆ ತಂದರು.

ಪುರಸಭೆ ಮುಖ್ಯಾಧಿಕಾರಿ ಬಸವರಾಜ ಸಿಗ್ಗಾವಿ, ಸದಸ್ಯರಾದ ಜಗದೀಶ್, ಪ್ರಭಾಕರ್, ಇಂಜಿನೀಯರ್ ಮೋಹನ್, ಆರೋಗ್ಯಾಧಿಕಾರಿ ಲೋಹಿತ್ ಮೊದಲಾದವರಿದ್ದರು.

# ಜಮ್ಮು: ಹಲವೆಡೆ ಭೂಕುಸಿತ, ಜನ ಜೀವನ ಅಸ್ತವ್ಯಸ್ತ

• ಪ್ರಜೋದಯ ವರದಿ

**ಜಮ್ಮು:** ರಾತ್ರಿಯಿಡೀ ಸುರಿದ ಮಳೆಯಿಂದಾಗಿ ಜಮ್ಮುವಿನ ಹಲವೆಡೆ ಸೋಮವಾರ ಪ್ರವಾಹ, ಭೂಕುಸಿತ ಸಂಭವಿಸಿದ್ದು, ದೋಡಾಕಿಶ್ತವಾಡ ಹೆದ್ದಾರಿ ಹಾನಿಗೊಳಗಾಗಿದೆ. ಹಲವಾರು ವಾಹನಗಳು ಜಖಂಗೊಂಡಿವೆ.

ಬೃಹತ್ ಪ್ರಮಾಣದಲ್ಲಿ ಮಣ್ಣು, ಬಂಡೆಕಲ್ಲು ಮತ್ತು ಇತರ ಅವಶೇಷಗಳು ರಸ್ತೆಯ ಮೇಲೆ ಬಿದ್ದಿವೆ. ರಸ್ತೆ ಬದಿ ನಿಲ್ಲಿಸಲಾಗಿದ್ದ ಹಲವು ವಾಹನಗಳು ಅವಶೇಷ ಗಳಡಿ ಸಿಲುಕಿದ್ದವು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕಿಶ್ತವಾಡ ಜಿಲ್ಲೆಯಲ್ಲಿ 540 ಎಂ.ವಿ. ಜಲವಿದ್ಯುತ್ ಯೋಜನೆಯ ಕಾಮಗಾರಿ ನಡೆಯುತ್ತಿರುವ ಸ್ಥಳದಲ್ಲಿ ಭೂಕುಸಿತ ಸಂಭವಿಸಿದೆ. ಟ್ರಕ್ ಸೇರಿ ಸ್ಥಳದಲ್ಲಿದ್ದ ವಾಹನಗಳು ಮತ್ತು ಯಂತ್ರಗಳು ಮಣ್ಣಿನಡಿ ಸಿಲುಕಿದ್ದವು.

ರಿಯಾಸಿ ಜಿಲ್ಲೆಯಲ್ಲಿಯೂ ಮಳೆಯಿಂದಾಗಿ ಸಣ್ಣ ಪ್ರಮಾಣದಲ್ಲಿ ಅವಘಡಗಳು ಸಂಭವಿಸಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. 24 ಗಂಟೆಗಳಲ್ಲಿ ಸಾಂಬಾ ಜಿಲ್ಲೆಯಲ್ಲಿ 90 ಮಿ.ಮೀ ಮತ್ತು ಕಠುವಾ ಜಿಲ್ಲೆಯಲ್ಲಿ 66 ಮಿ.ಮೀ ಮಳೆಯಾಗಿದೆ.

# ದುಡಿಯುವ ವರ್ಗದ ಪರ ಧ್ವನಿ ಎತ್ತುವುದು ಸುಲಭದ ಕೆಲಸವಲ್ಲ

• ಪ್ರಜೋದಯ ವರದಿ

**ಹಾಸನ:** ದುಡಿಯುವ ಜನರ ಪರವಾಗಿ ಧ್ವನಿ ಎತ್ತುವುದು ಮಾತ್ರವಲ್ಲದೆ ಸಮಸ್ಯೆಗೆ ಪರಿಹಾರ ಕಲ್ಪಿಸುವ ತನಕ ಹೋರಾಡುವ ಛಲ ಇರುವುದು ಕಮ್ಯುನಿಸ್ಟರಿಗೆ ಮಾತ್ರ ಎಂದು ಸಿಐಟಿಯು ರಾಜ್ಯ ಪ್ರಧಾನ ಕಾರ್ಯದರ್ಶಿ ಎಸ್.ವರಲಕ್ಷ್ಮಿ ಅವರು ಅಭಿಪ್ರಾಯಪಟ್ಟರು.



ಇತ್ತೀಚೆಗೆ ನಿಧನರಾದ ಸಿಐಟಿಯು ಜಿಲ್ಲಾ ಉಪಾಧ್ಯಕ್ಷ ಜಿ.ಪಿ. ಸತ್ಯನಾರಾಯಣ ಅವರ ನಿಧನಕ್ಕೆ ಸಿಐಟಿಯು ಹಾಗು ಸಿಪಿಐ(ಎಂ) ವತಿಯಿಂದ ನಗರದ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ನಡೆದ ಶ್ರದ್ಧಾಂಜಲಿ ಸಭೆಯಲ್ಲಿ ಅವರು ಮಾತನಾಡಿ, ಸತ್ಯನಾರಾಯಣ ಅವರು ವರ್ಗರಹಿತ ಸಮಾಜ ಕಟ್ಟಲು ಶ್ರಮಿಸಿದ ಸಂಗಾತಿ. ಕಮ್ಯುನಿಸ್ಟ್ ಆಗಿ ಕೆಲಸ ಮಾಡುವುದು ಸುಲಭವಲ್ಲ. ದಿನದಿಂದ ದಿನಕ್ಕೆ ಕಾರ್ಮಿಕ ವರ್ಗ ಸಂಕಷ್ಟಕ್ಕೆ ಸಿಲುಕುತ್ತಿದೆ, ದುಡಿಯುವ ಜನರ ಬದುಕು ದುಸ್ತರವಾಗುತ್ತಿದೆ. ಇಂತಹವರ ಸಮಸ್ಯೆಗಳನ್ನು ಮುಂದಿಟ್ಟು ಹೋರಾಟ ಮಾಡಲು ಮುಂಚೂಣಿಯಲ್ಲಿದ್ದ ನಾಯಕನ ಅಗಲಿಕೆ ಸಾಕಷ್ಟು ನಷ್ಟ ತಂದೊಡ್ಡಿದೆ. ದೊಡ್ಡ ದೊಡ್ಡ ಸವಾಲುಗಳು ನಮ್ಮ ಎದುರಿಗಿವೆ. ಬೆಂಗಳೂರು ಸೇರಿ ರಾಜ್ಯದ ಹಲವೆಡೆ ಬೀದಿ ಬದಿ ವ್ಯಾಪಾರಿ ಗಳನ್ನು ಎತ್ತಂಗಡಿ ಮಾಡಲಾಗುತ್ತಿದೆ. ರಾಜ್ಯದ ಸಚಿವರೇ ಬಹಿರಂಗವಾಗಿ ಅಮಾನವೀಯ ಹೇಳಿಕೆ ನೀಡುವ ಜೊತೆಗೆ ಸುಪ್ರೀಂ ಕೋರ್ಟ್ ಆದೇಶವೆಂದು ಸಮರ್ಥನೆ ಮಾಡಿಕೊಳ್ಳುತ್ತಿದ್ದಾರೆ. ಇಂತಹ ದೌರ್ಜನ್ಯಕ್ಕೆ ಭಾಷೆ, ಪ್ರದೇಶದ ಆಧಾರದಲ್ಲಿ ವಿಭಜನೆ ಮಾಡುವ ಕೆಲಸ ಆಗುತ್ತಿದೆ. ಇಂತಹ ಸವಾಲುಗಳ ನಡುವೆ ಜಿ.ಪಿ.ಸತ್ಯನಾರಾಯಣ ಅವರ ಅಗಲಿಕೆ ಕಾರ್ಮಿಕ, ಕಮ್ಯುನಿಸ್ಟ್ ಚಳವಳಿಗೆ ತುಂಬಲಾರದ ನಷ್ಟವುಂಟು ಮಾಡಿದೆ ಎಂದರು.

ಸಿಐಟಿಯು ಜಿಲ್ಲಾಧ್ಯಕ್ಷ ಧರ್ಮೇಶ್ ಅವರು ಮಾತನಾಡಿ, ಜಿ.ಪಿ.ಸತ್ಯನಾರಾಯಣ ಅವರು ಕಾರ್ಮಿಕರಾಗಿ ಕಾರ್ಮಿಕ ಸಂಘಟನೆ ಸೇರಿದ ಬಳಿಕ ಕಾರ್ಮಿಕ ನಾಯಕರಾಗಿ ಬೆಳೆದವರು. ಮೂರು ಬಾರಿ ಸಿಐಟಿಯು ಜಿಲ್ಲಾ ಖಜಾಂಚಿಯಾಗಿ, ಹಾಲಿ ಉಪಾಧ್ಯಕ್ಷರಾಗಿ ಜೀವಿತದ ಕೊನೆಯ ಕ್ಷಣದ ವರೆಗೂ ಕಾರ್ಮಿಕರ ವಿಮೋಚನೆಗಾಗಿ ಹೋರಾಟ ಮಾಡಿದ್ದಾರೆಂದರು.

ಸಿಐಟಿಯು ಮುಖಂಡರಾದ ವಿ. ಸುಕುಮಾರ್, ಸಿಪಿಐಎಂ ಜಿಲ್ಲಾ ಕಾರ್ಯದರ್ಶಿ ಹೆಚ್.ಆರ್.ನವೀನ್ ಕುಮಾರ್, ಸಿಐಟಿಯು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಂ.ಬಿ. ಪುಷ್ಪ, ಅರವಿಂದ, ಡಿವೈಎಫ್‌ಐ ಪೃಥ್ವಿ, ವಿಜಯ್ ಕುಮಾರ್ ದಂಡೋರ, ಸತ್ಯನಾರಾಯಣ ಅವರ ಪತ್ನಿ ವನಜಾಕ್ಷಿ, ಮಗ ಕಾರ್ತಿಕ್ ಮೊದಲಾದವರಿದ್ದರು.

**ಫ್ರಾನ್ಸ್, ಮೊರಾಕೊ, ಇಂಗ್ಲೆಂಡ್, ನಾರ್ವೆ ತಂಡಗಳು ಪ್ರವೇಶ**

# ಕ್ವಾರ್ಟರ್ ಫೈನಲ್‌ಗೆ ಬಲಿಷ್ಠ ತಂಡಗಳ ಪೈಪೋಟಿ

• ಪ್ರಜೋದಯ ವರದಿ


**ಮೆಕ್ಸಿಕೊ ಸಿಟಿ:** ಫಿಫಾ ವಿಶ್ವಕಪ್‌ನಲ್ಲಿ ತಂಡಗಳ ಸಂಖ್ಯೆಯನ್ನು 48ಕ್ಕೆ ಹೆಚ್ಚಿಸಲಾಗಿದೆ. ಇದೇ ಮೊದಲ ಬಾರಿಗೆ ಆಡಲು ಅರ್ಹತೆ ಪಡೆದಿರುವ ತಂಡಗಳು ಬಲಿಷ್ಠ ತಂಡಗಳಿಗೆ ಪ್ರಬಲ ಪೈಪೋಟಿ ನೀಡುವ ಮೂಲಕ ಅಚ್ಚರಿ ಫಲಿತಾಂಶ ಕೊಟ್ಟಿವೆ. ಪ್ರಸ್ತುತ ಪ್ರೀ ಕ್ವಾರ್ಟರ್ ಪಂದ್ಯಗಳು ನಡೆಯುತ್ತಿದ್ದು, 4 ತಂಡಗಳು ಈಗಾಗಲೇ ಕ್ವಾರ್ಟರ್ ಫೈನಲ್ ಪ್ರವೇಶಿಸಿವೆ.

**ಐದು ಬಾರಿಯ ಚಾಂಪಿಯನ್ನರಿಗೆ ಆಘಾತ ನೀಡಿದ ನಾರ್ವೆ**

ಜುಲೈ 5ರಂದು ಮುಕ್ತಾಯ ಗೊಂಡ ಪ್ರೀ ಕ್ವಾರ್ಟರ್ ಪಂದ್ಯದಲ್ಲಿ ಬಲಿಷ್ಠ ಬ್ರೆಜಿಲ್ ತಂಡದ ವಿರುದ್ಧ ಅಮೋಘ ಪ್ರದರ್ಶನ ತೋರಿದ ನಾರ್ವೆ 2-1ರ ಅಂತರದಲ್ಲಿ ಗೆದ್ದು, ಫಿಫಾ ವಿಶ್ವಕಪ್ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಅಂತಿಮ ಎಂಟರ ಘಟ್ಟಕ್ಕೆ ಪ್ರವೇಶಿಸಿದೆ. ಐದು ಬಾರಿಯ ಚಾಂಪಿಯನ್ ಬ್ರೆಜಿಲ್ ಟೂರ್ನಿಯಿಂದ ಹೊರಬಿದ್ದಿದೆ.

**ಪರಗ್ವೆ ವಿರುದ್ಧ ಗೆದ್ದು ಕ್ವಾರ್ಟರ್ ಪ್ರವೇಶಿಸಿದ ಫ್ರಾನ್ಸ್:** ಎಂಬಾಪೆ ನಾಯಕತ್ವದ ಫ್ರಾನ್ಸ್ ತಂಡವು ಈ ಬಾರಿ ಫಿಫಾ ವಿಶ್ವಕಪ್‌ನಲ್ಲಿ ಅಮೋಘ ಪ್ರದರ್ಶನ ತೋರುತ್ತಿದೆ. ಅದರಂತೆ, ಜುಲೈ 4ರ ತಡರಾತ್ರಿ ನಡೆದ ಪ್ರೀ ಕ್ವಾರ್ಟರ್ ಪಂದ್ಯದಲ್ಲಿ





ಫ್ರಾನ್ಸ್ 1-0 ಅಂತರದಲ್ಲಿ ಪರಗ್ವೆ ಎದುರು ಜಯಿಸಿ, ಕ್ವಾರ್ಟರ್ ಫೈನಲ್ ತಲುಪಿದೆ.

**ಮೆಕ್ಸಿಕೊ ವಿರುದ್ಧ ಗೆದ್ದ ಇಂಗ್ಲೆಂಡ್**

ಸೋಮವಾರ ಮುಂಜಾನೆ ನಡೆದ ಪ್ರಿ-ಕ್ವಾರ್ಟರ್ ಪಂದ್ಯದಲ್ಲಿ ಇಂಗ್ಲೆಂಡ್ ತಂಡವು ಆತಿಥೆಯ ಮೆಕ್ಸಿಕೊ ವಿರುದ್ಧ 3-2 ಗೋಲುಗಳ ಅಂತರದಲ್ಲಿ ಗೆಲ್ಲುವ ಮೂಲಕ ಕ್ವಾರ್ಟರ್ ಫೈನಲ್ ಪ್ರವೇಶ ಪಡೆದುಕೊಂಡಿದೆ.

**ಕೆನಡಾ ವಿರುದ್ಧ 3-0 ಗೆಲುವು ದಾಖಲಿಸಿದ ಮೊರಾಕೊ**

ವಿಶ್ವಕಪ್‌ನ ಪ್ರೀ ಕ್ವಾರ್ಟರ್ ಪಂದ್ಯದಲ್ಲಿ ಮೊರಾಕೊ ತಂಡವು ಕೆನಡಾ ವಿರುದ್ಧ 3-0 ಅಂತರದ ಗೆಲುವು ದಾಖಲಿಸುವ ಮೂಲಕ ಕ್ವಾರ್ಟರ್ ಫೈನಲ್‌ಗೆ ಲಗ್ಗೆ ಇಟ್ಟಿದೆ. ಸದ್ಯ ಫ್ರಾನ್ಸ್, ಮೊರಾಕೊ, ಇಂಗ್ಲೆಂಡ್ ಮತ್ತು ನಾರ್ವೆ ತಂಡಗಳು ಕ್ವಾರ್ಟರ್ ಫೈನಲ್ ಪ್ರವೇಶ ಪಡೆದುಕೊಂಡರೆ, ಬಾಕಿ ಉಳಿದಿರುವ ನಾಲ್ಕು ಸ್ಥಾನಗಳಿಗೆ ಯಾವ ತಂಡಗಳು ಸ್ಥಾನ ಪಡೆಯಲಿವೆ ಎಂಬುದನ್ನು ಕಾದು ನೋಡಬೇಕಿದೆ.

**ಕ್ವಾರ್ಟರ್ ಫೈನಲ್‌ಗೆ ಹೆಚ್ಚಿದ ಪೈಪೋಟಿ**

ಅರ್ಜೆಂಟೀನಾ-ಈಜಿಪ್ಟ್, ಸ್ವಿಡ್ಜರ್‌ಲ್ಯಾಂಡ್-ಕೊಲಂಬಿಯಾ, ಅಮೇರಿಕಾ-ಬೆಲ್ಜಿಯಂ ಹಾಗು ಪೋರ್ಚುಗಲ್-ಸ್ಪೇನ್ ಈ ತಂಡಗಳು ಪೈಪೋಟಿ ನಡೆಸಲಿವೆ. ಈ 8 ತಂಡಗಳ ಪೈಕಿ ನಾಲ್ಕು ತಂಡಗಳು ಮಾತ್ರ ಕ್ವಾರ್ಟರ್ ಫೈನಲ್‌ಗೆ ಪ್ರವೇಶ ಪಡೆಯಲಿವೆ. ಪ್ರಸ್ತುತ ನಡೆ ಯುತ್ತಿರುವ 2026ರ ಫಿಫಾ ವಿಶ್ವಕಪ್ ಅಂತಿಮ ಹಂತ ತಲುಪಿದ್ದು, ಟೂರ್ನಿಯು ದಿನೇ ದಿನೇ ರೋಚಕತೆ ಹೆಚ್ಚಿಸಿಕೊಳ್ಳುತ್ತಿದೆ. 48 ಪಂದ್ಯಗಳ ಪೈಕಿ ಪ್ರಸ್ತುತ 12 ತಂಡಗಳು ಮಾತ್ರ ಪೈಪೋಟಿ ಯಲ್ಲಿ ಉಳಿದುಕೊಂಡಿವೆ.

# ಪುನೀತ್ ಕೆರೆಹಳ್ಳಿ ಬಂಧನಕ್ಕೆ ಸ್ವಾಮೀಜಿ ಖಂಡನೆ

• ಪ್ರಜೋದಯ ವರದಿ



**ಆಲೂರು:** ಗೋ ರಕ್ಷಣೆ, ಹಿಂದೂ ದೇವಾಲಯ ಉಳಿವಿಗಾಗಿ ನಿರಂತರ ಹೋರಾಟ ಮಾಡುತ್ತಾ ಧರ್ಮ ರಕ್ಷಣೆಯಲ್ಲಿ ತೊಡಗಿಸಿಕೊಂಡಿರುವ ರಾಷ್ಟ್ರ ರಕ್ಷಣಾ ಪಡೆಯ ಪುನೀತ್ ಕೆರೆಹಳ್ಳಿ ಅವರನ್ನು ಏಕಾಏಕಿ ಬಂಧಿಸಿರುವುದು ಖಂಡನೀಯ ಎಂದು ಕಾರ್ಜುವಳ್ಳಿ ಹಿರೇಮಠದ ಪೀಠಾಧ್ಯಕ್ಷ ಸದಾಶಿವ ಶಿವಾಚಾರ್ಯ ಸ್ವಾಮೀಜಿ ಹೇಳಿದ್ದಾರೆ.

ಪುನೀತ್ ಕೆರೆಹಳ್ಳಿ ಅವರು ಯುವಕರ ತಂಡ ಕಟ್ಟಿಕೊಂಡು ರಾಷ್ಟ್ರಕ್ಕಾಗಿ ಕೆಲಸ ಮಾಡುತ್ತಿದ್ದಾರೆ. ಹಿಂದೂ ಧರ್ಮ ಸಂರಕ್ಷಣೆಗಾಗಿ ಪ್ರಾಣದ ಹಂಗು ತೊರೆದು ಕೆಲಸ ಮಾಡುತ್ತಿದ್ದಾರೆ. ಯಾವುದೇ ಒಂದು ಧರ್ಮ ಅಥವಾ ಜನಾಂಗದ ವಿರುದ್ಧ ಅವರು ಕೆಲಸ ಮಾಡುತ್ತಿಲ್ಲ. ಮೌಲ್ವಿಯೊಬ್ಬರಿಗೆ ನಿಂದಿಸಿದ್ದಾರೆಂಬ ಸುಳ್ಳು ಆರೋಪದಡಿ ಅವರನ್ನು ಯಾವುದೇ ನೋಟೀಸ್ ನೀಡದೆ ಬಂಧಿಸಿರು ವುದು ಖಂಡನೀಯ. ಇಂತಹ ಸೂಕ್ಷ್ಮ ಪರಿಸ್ಥಿತಿಯಲ್ಲಿ ಸರ್ಕಾರ ಎಚ್ಚರಿಕೆಯ ಹೆಜ್ಜೆ ಇಡಬೇಕಾ ಗುತ್ತದೆ. ಪ್ರಕರಣದ ಸತ್ಯಾಸತ್ಯತೆ ಅರಿತು ಕ್ರಮ ಜರುಗಿಸಬೇಕು. ಕೆರೆಹಳ್ಳಿಯ ಮನೆಯಲ್ಲಿದ್ದಾಗ ತಂದೆ-ತಾಯಿಯ ಎದುರೇ ಪುನೀತ್ ಅವರನ್ನು ಬಂಧಿಸಿರುವುದು ಅಕ್ಷಮ್ಯ. ರಾಜ್ಯ ಸರ್ಕಾರದ ಈ ನಡೆ ಖಂಡನೀಯ ಎಂದರು.

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019